ಸಂಪುಟ 01 | ಸಂಚಿಕೆ 244 ಭಾನುವಾರ 08 ನವೆಂಬರ್ 2026 | ಪುಟ 4 | ಬೆಲೆ-2 ರೂ.
Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) **ದೀಪಾವಳಿ ಮತ್ತು ಲಕ್ಷ್ಮಿ ಪೂಜೆ:** 2026ರ ನವೆಂಬರ್ 8 ರಂದು ದೀಪಾವಳಿ ಹಬ್ಬ ಹಾಗೂ ಲಕ್ಷ್ಮಿ ಪೂಜೆ ಬಂದಿದೆ. ಈ ದಿನ ಸಂಜೆ 5:54 ರಿಂದ ರಾತ್ರಿ 7:50 ರವರೆಗೆ ಲಕ್ಷ್ಮಿ ಪೂಜೆಗೆ ಶುಭ ಮುಹೂರ್ತವಿದೆ.

2) **ರಾಷ್ಟ್ರೀಯ STEM/STEAM ದಿನ:** ವಿಜ್ಞಾನ, ತಂತ್ರಜ್ಞಾನ, ಎಂಜಿನಿಯರಿಂಗ್, ಕಲೆ ಮತ್ತು ಗಣಿತದಲ್ಲಿ ಆಸಕ್ತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತದೆ.

3) **ಐತಿಹಾಸಿಕ ಘಟನೆ (ಎಕ್ಸ್-ರೇ ಆವಿಷ್ಕಾರ):** 1895 ರ ನವೆಂಬರ್ 8 ರಂದು ಜರ್ಮನ್ ಭೌತಶಾಸ್ತ್ರಜ್ಞ ವಿಲ್ಹೆಲ್ಮ್ ಕಾನ್ರಾಡ್ ರಾಂಟ್ಜೆನ್ ಅವರು ಕ್ಷ-ಕಿರಣಗಳನ್ನು (X-rays) ಕಂಡುಹಿಡಿದರು.

4) **ವಿಖ್ಯಾತ ವ್ಯಕ್ತಿಗಳ ಜನ್ಮದಿನ:** ಇಂಗ್ಲಿಷ್ ಖಗೋಳಶಾಸ್ತ್ರಜ್ಞ ಮತ್ತು ಗಣಿತಶಾಸ್ತ್ರಜ್ಞರಾದ ಟಿ. ಎಡ್ಮಂಡ್ ಹ್ಯಾಲಿ ಅವರು 1656 ರ ನವೆಂಬರ್ 8 ರಂದು ಜನಿಸಿದರು.

5) **ಅಂತರರಾಷ್ಟ್ರೀಯ ರೇಡಿಯಾಲಜಿ ದಿನ:** ನವೆಂಬರ್ 8 ರಂದು ಅಂತರರಾಷ್ಟ್ರೀಯ ರೇಡಿಯಾಲಜಿ ದಿನವನ್ನು ಕೂಡ ಆಚರಿಸಲಾಗುತ್ತದೆ.

ಸುಭಾಷಿತ

ಕ್ರಿಯಾಶೀಲರಾಗಿ ಜೀವನ ನಡೆಸಬೇಕು.
ಬಡತನವೇ ಇರಲಿ, ಸೋಲೇಬರಲಿ,
ಅವಮಾನವೇ ಬರಲಿ, ಇದನ್ನು ಮೀರಿ
ಗಟ್ಟಿಯಾಗಿ ನಿಂತು ಉತ್ಸಾಹದಿಂದ ಇರೋದೆ
ಜೀವನ. ಸೂರ್ಯ ಚಂದ್ರರಂತೆ ಮನುಷ್ಯ
ಪ್ರಪಂಚದ ಯುದ್ದದಲ್ಲಿ ಏಕಾಂಗಿಯಾಗಿ
ಹೋರಾಡಿ, ಬದುಕುವುದೇ ನಿಜ ಜೀವನ.

–ಅಭಿನವ ಗವಿ ಸಿದ್ದೇಶ್ವರ ಸ್ವಾಮೀಜಿ ಕೊಪ್ಪಳ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಕಬ್ಬು ದರ ವಿವಾದಕ್ಕೆ ಸುಖಾಂತ್ಯ ಇತಿಹಾಸದಲ್ಲೇ ಮೊದಲ ಬಾರಿಗೆ

'ಲಾಭ ಹಂಚಿಕೆ ಸೂತ್ರ' ಜಾರಿ!

❑ ನೈಜ್ಯ ದೆಸೆ ನ್ಯೂಸ್

ಬೆಳಗಾವಿ: ನಿರಂತರ ರೈತರ ಹೋರಾಟಕ್ಕೆ ಗೆಲುವು ಹಾಗೆ ಹೋರಾಟ ವಾಪಸ್ ಪಡೆದ ಚನ್ನಪ್ಪ ಪೂಜಾರಿ ,ಶಶಿಕಾಂತ್ ಗುರುಜಿ, ಇಂದಿನಿಂದ ಸಕ್ಕರೆ ಕಾರ್ಖಾನೆ ಪ್ರಾರಂಭ ಕಬ್ಬು ಬೆಳೆಗಾರರ ಹಿತರಕ್ಷಣೆಗೆ ಮುಂದಾಗಿರುವ ಬೆಳಗಾವಿ ಜಿಲ್ಲಾಡಳಿತ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ "ಲಾಭ ಹಂಚಿಕೊಳ್ಳುವ ಸೂತ್ರದಡಿಯಲ್ಲಿ ಕಬ್ಬಿನ ಬೆಲೆಯನ್ನು ನಿಗದಿಪಡಿಸಿದೆ ಆದೇಶ ಹೊರಡಿಸಿದೆ.



ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಕ್ಕರೆ ಕಾರ್ಖಾನೆ ಮಾಲೀಕರ ಸಭೆಯಲ್ಲಿ ಈ ಸೂತ್ರವನ್ನು ಸಿದ್ಧಪಡಿಸಲಾಗಿದೆ. ರೈತರ ಬೇಡಿಕೆಗಳಿಗೆ ಅನುಗುಣವಾಗಿರುವ ಈ ಸೂತ್ರಕ್ಕೆ ಕಾರ್ಖಾನೆ ಮಾಲೀಕರು ಸಹಮತ ಸೂಚಿಸಿದ್ದು, ರಾಷ್ಟ್ರಮಟ್ಟದಲ್ಲಿ ಇದೇ ಮೊದಲ ಬಾರಿಗೆ "ಲಾಭ ಹಂಚಿಕೊಳ್ಳುವ ಸೂತ್ರ ಜಾರಿಗೊಳಿಸಲಾಗುತ್ತಿದೆ ಎಂದು ಬೆಳಗಾವಿ ಜಿಲ್ಲಾ ಆಡಳಿತ ಪ್ರಕಟಣೆ ಹೊರಡಿಸಿದೆ.

ಈ ಮುಂಚೆ ಕಾರ್ಖಾನೆಗಳ ಒಟ್ಟು ಆದಾಯದ ಮೇಲೆ ಲಾಭ ಹಂಚಿಕೆ ಇರುತ್ತಿತ್ತು. ಆದರೆ ಈ ಹೊಸ ಸೂತ್ರದ ಪ್ರಕಾರ ಸಕ್ಕರೆ ಮಾರಾಟದ ಸರಾಸರಿ ಲಾಭವನ್ನು ಹಂಚಿಕೊಳ್ಳಲು ನಿರ್ಧರಿಸಲಾಗಿದೆ. ಮುಂಬರುವ ದಿನಗಳಲ್ಲಿ ಇದ-ರಿಂದ ಕಬ್ಬು ಪೂರೈಸುವ ರೈತರಿಗೆ ಇನ್ನಷ್ಟು ಉತ್ತಮ ದರ ಸಿಗಲಿದೆ ಎಂದು ಜಿಲ್ಲಾ ಆಡಳಿತ ನಿರೀಕ್ಷಿಸಿದೆ.

ಲಾಭ ಹಂಚಿಕೆ" ಸೂತ್ರ ರೂಪಿಸಿದ ಜಿಲ್ಲಾಡಳಿತ: ಕಬ್ಬಿನ ದರ ಹೆಚ್ಚಿಸುವಂತೆ ಆಗ್ರಹಿಸಿ ರೈತರು ಹಲವಾರು ದಿನಗಳಿಂದ ರಾಜ್ಯದಾದ್ಯಂತ ಪ್ರತಿಭಟನೆ ನಡೆಸುತ್ತಿದ್ದು, ರಾಜ್ಯ ಸರಕಾರ ಕೂಡ ಪ್ರೋತ್ಸಾಹ ಧನವನ್ನು ಹೆಚ್ಚಿಸಬೇಕು ಎಂಬುದು ಪ್ರಮುಖ ಬೇಡಿಕೆಯಾಗಿತ್ತು. ಈ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ನೇತೃತ್ವದಲ್ಲಿ ಜಿಲ್ಲಾಡಳಿತವು ಸಕ್ಕರೆ ಕಾರ್ಖಾನೆಗಳ ಮಾಲೀಕರು ಹಾಗೂ ಕಬ್ಬು ಬೆಳೆಗಾರರ ಜತೆ ಹಲವು ಸುತ್ತಿನ ಮಾತುಕತೆಯ ಬಳಿಕ ರೈತರ ಹಿತರಕ್ಷಣೆ ದೃಷ್ಟಿಯಿಂದ ಇತಿಹಾಸದಲ್ಲೇ ಮೊದಲ ಎನ್ನಲಾಗಿರುವ "ಲಾಭ ಹಂಚಿಕೆ" ಸೂತ್ರವನ್ನು ರೂಪಿಸಿದೆ.

ಇದರಲ್ಲಿ ಮುಖ್ಯವಾಗಿ 2026–27ನೇ ಹಂಗಾಮಿನ ಕಬ್ಬು ನುರಿಸುವ ದರ ನಿಗದಿ ವಿಚಾರವಾಗಿ ರೈತ ಮುಖಂಡರು ಹಾಗೂ ಸಕ್ಕರೆ ಕಾರ್ಖಾನೆಗಳ ಮಾಲೀಕರ ನಡುವೆ ನಡೆದ ಸಭೆಯಲ್ಲಿ ಪ್ರತಿ ಟನ್ ಕಬ್ಬಿಗೆ 3600 ಮುಂಗಡ ದರ ನೀಡಲು ಒಪ್ಪಂದ ಮಾಡಿಕೊಳ್ಳಲಾಗಿದೆ.

350 ಹೆಚ್ಚುವರಿ ಪಾವತಿಸಲು ಕಾರ್ಖಾನೆಗಳು ಒಪ್ಪಿಗೆ: ಲೋಕೋಪಯೋಗಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಮತ್ತು ಪ್ರಭಾರಿ ಜಿಲ್ಲಾಧಿಕಾರಿ ರಾಹುಲ್ ಶಿಂಧೆ ಸಮುಖದಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಹಿಂದಿನ ಹಂಗಾಮಿಗಿಂತ ಈ ಬಾರಿ ಪ್ರತಿ ಟನ್‌ಗೆ ?350 ಹೆಚ್ಚುವರಿ ಪಾವತಿಸಲು ಸಕ್ಕರೆ ಕಾರ್ಖಾನೆಗಳು ಒಪ್ಪಿಕೊಂಡಿವೆ. ಕಬ್ಬಿನ ಪಾವತಿಯ ವಿವರಗಳು ಈ ಕೆಳಗಿನಂತಿವೆ: ಒಪ್ಪಂದದ ಪ್ರಕಾರ, ಮೊದಲ ಕಂತಿನಲ್ಲಿ ಪ್ರತಿ ಟನ್‌ಗೆ 3600 ಪಾವತಿಸಲಾಗುತ್ತದೆ. ಹಂಗಾಮು ಮುಕ್ತಾಯಗೊಂಡ ಬಳಿಕ ಎರಡನೇ ಕಂತಿನಲ್ಲಿ 100 ಹೆಚ್ಚುವರಿಯಾಗಿ ನೀಡಲಾಗುತ್ತದೆ. ಅಲ್ಲದೆ, ಹೊಸ ಹಂಗಾಮು ಆರಂಭವಾಗುವ ಮೊದಲು ಪ್ರತಿ ಕೆ.ಜಿ. ಸಕ್ಕರೆಯ ಸರಾಸರಿ ಮಾರುಕಟ್ಟೆ ದರ 45 ಮೀರಿದರೆ, ಅದರ ಆಧಾರದ ಮೇಲೆ ಅಂತಿಮ ಕಂತಿನ ಹಣ ಪಾವತಿಸಲಾಗುತ್ತದೆ. ಸಕ್ಕರೆಯ ಸರಾಸರಿ ದರ 48 ಇದ್ದರೆ ಪ್ರತಿ ಟನ್ ಕಬ್ಬಿಗೆ 3650, 49 ಇದ್ದರೆ 3750, 50 ಇದ್ದರೆ 3850 ಹಾಗೂ 55 ಇದ್ದರೆ 4350 ದರ ನಿಗದಿಪಡಿಸುವ ಲೆಕ್ಕಾಚಾರವನ್ನು ಒಪ್ಪಂದದಲ್ಲಿ ನಮೂದಿಸಲಾಗಿದೆ. ಈಗಾಗಲೇ ಪಾವತಿಸಿದ ?3600 ಕಡಿತಗೊಳಿಸಿ ಉಳಿದ ಹೆಚ್ಚುವರಿ ಮೊತ್ತದಲ್ಲಿ ಶೇ.75ರಷ್ಟು ರೈತರಿಗೆ ಹಾಗೂ ಶೇ.25ರಷ್ಟು ಸಕ್ಕರೆ ಕಾರ್ಖಾನೆಗಳಿಗೆ ಹಂಚಿಕೆಯಾಗಲಿದೆ.

ಎಸ್.ಎಲ್.ಎನ್. ಎಂಜಿನಿಯರಿಂಗ್ ಕಾಲೇಜಿನಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಅಭಿಯಾನ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ರಾಯಚೂರು ಗ್ರಾಮೀಣ ಪೊಲೀಸ್ ವೃತ್ತ ವ್ಯಾಪ್ತಿಯ ಎಸ್.ಎಲ್.ಎನ್. ಎಂಜಿನಿಯರಿಂಗ್ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗಾಗಿ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.



ರಾಯಚೂರು ಗ್ರಾಮೀಣ ವೃತ್ತದ ಸಿಪಿಐ, ಡಿಸಿಆರ್‌ಬಿ ವಿಭಾಗದ ಪಿಎಸ್‌ಐ ಹಾಗೂ ಎಎನ್‌ಟಿಎಫ್ (ಒಓಖಿಈ) ಪೊಲೀಸ್ ತಂಡದ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದೈಹಿಕ ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳು, ಶಿಕ್ಷಣದ ಮೇಲೆ ಬೀರುವ ದುಷ್ಪರಿಣಾಮಗಳು ಹಾಗೂ ಭವಿಷ್ಯದ ಜೀವನದ ಮೇಲೆ ಉಂಟಾಗುವ ಪರಿಣಾಮಗಳ ಕುರಿತು ಅರಿವು ಮೂಡಿಸಲಾಯಿತು.

ಯುವಜನತೆ ಮಾದಕ ವಸ್ತುಗಳ ವ್ಯಸನದಿಂದ ದೂರವಿದ್ದು, ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಬೇಕು. ಮಾದಕ ವಸ್ತುಗಳ ಬಳಕೆ ಮತ್ತು ಮಾರಾಟದಂತಹ ಚಟುವಟಿಕೆಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕು ಎಂಬ ಸಂದೇಶ ನೀಡಲಾಯಿತು.

ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸುವುದು ಹಾಗೂ ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಯುವಜನತೆಯ ಸಹಭಾಗಿತ್ವ ಪಡೆಯುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು.

ಪ್ರಜಾಪ್ರಭುತ್ವದ ರಕ್ಷಣೆಗೆ ಕೊಪ್ಪಳದಲ್ಲಿ ಬೃಹತ್ ಜನಜಾಗೃತಿ ಪಾದಯಾತ್ರೆ: ಮಾಜಿ ಸಂಸದರಾದ ಬಿ. ವಿನಾಯಕ, ಕೆ. ಕರಿಯಪ್ಪ ಭಾಗಿ

❑ ನೈಜ್ಯ ದೆಸೆ ನ್ಯೂಸ್

ಕೊಪ್ಪಳ: "ಪ್ರಜಾಪ್ರಭುತ್ವ ಉಳಿಸಿ ಅರಾಜ-ಕತೆ ಅಳಿಸಿ" ಎಂಬ ಘೋಷವಾಕ್ಯದೊಂದಿಗೆ ಇಂದು ಕೊಪ್ಪಳದಲ್ಲಿ ಹಮ್ಮಿಕೊಳ್ಳಲಾಗಿದ್ದ ಬೃಹತ್ ಜನಜಾಗೃತಿ ಪಾದಯಾತ್ರೆಯಲ್ಲಿ ಬಿಜೆಪಿ ಮುಖಂಡರು ಹಾಗೂ ಮಾಜಿ ಸಂಸದರಾದ ಬಿ. ವಿನಾಯಕ ಮತ್ತು ಕೆ. ಕರಿಯಪ್ಪ ಅವರು ಭಾಗವಹಿಸಿದರು.



ಪ್ರಜಾಪ್ರಭುತ್ವದ ಆಶಯಗಳು ಮತ್ತು ಮೌಲ್ಯಗಳನ್ನು ಜನರಿಗೆ ತಲುಪಿಸುವುದು, ಪ್ರಜಾಸತ್ತಾತ್ಮಕ ವ್ಯವಸ್ಥೆಯ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಹಾಗೂ ಪ್ರಜಾಪ್ರಭುತ್ವದ ರಕ್ಷಣೆಗೆ ಜನರನ್ನು ಜಾಗೃತಗೊಳಿಸುವ ಉದ್ದೇಶದಿಂದ ಈ ಅಭಿಯಾನ ಆಯೋಜಿಸಲಾಗಿತ್ತು.

ಪಾದಯಾತ್ರೆಯಲ್ಲಿ ಪಾಲ್ಗೊಂಡ ಮುಖಂಡರು ಜನಜಾಗೃತಿಯ ಸಂದೇಶ ಸಾರಿದರು. ಪ್ರಜಾಪ್ರಭುತ್ವವು ಕೇವಲ ಆಡಳಿತ ವ್ಯವಸ್ಥೆಯಲ್ಲ, ಅದು ಜನರ ಹಕ್ಕುಗಳು, ಸ್ವಾತಂತ್ರ್ಯ, ಸಮಾನತೆ ಮತ್ತು ಸಂವಿಧಾನದ ಆಶಯಗಳನ್ನು ಪ್ರತಿಬಿಂಬಿಸುವ ವ್ಯವಸ್ಥೆಯಾಗಿದೆ ಎಂಬುದನ್ನು ಅಭಿಯಾನದ ಮೂಲಕ ಒತ್ತಿಹೇಳಲಾಯಿತು.

ಜನರು ಪ್ರಜಾಪ್ರಭುತ್ವದ ಮೌಲ್ಯಗಳ ಬಗ್ಗೆ ಜಾಗೃತರಾಗಬೇಕು ಹಾಗೂ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಬಲವರ್ಧನೆಗೆ ತಮ್ಮ ಪಾತ್ರವನ್ನು ನಿರ್ವಹಿಸಬೇಕು ಎಂಬ ಸಂದೇಶದೊಂದಿಗೆ ಪಾದಯಾತ್ರೆ ಗಮನ ಸೆಳೆಯಿತು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಯಾನದ ಬೆಂಬಲಿಗರು ಪಾಲ್ಗೊಂಡಿದ್ದರು.

ನೀರಿಗಾಗಿ ರೈತರ ಪ್ರತಿಭಟನೆ,ರೈತರ ಒಗ್ಗಟ್ಟು ಶಕ್ತಿ ಪ್ರದರ್ಶನ ವೇದಿಕೆ

❑ ನೈಜ್ಯ ದೆಸೆ ನ್ಯೂಸ್

ಹಾಲಾಪೂರ: ತುಂಗಭದ್ರಾ ಎಡದಂಡೆ 62 ರಿಂದ 74ನೇ ಉಪ ಕಾಲುವೆಗಳಿಗ ಸರಿಯಾದ ರೀತಿಯಲ್ಲಿ ನೀರು ಬಿಡುತ್ತಿಲ್ಲ ಎಂದು ಮಸ್ಕಿ ತಾಲೂಕಿನ ಹಾಲಾಪೂರ ಗ್ರಾಮದಲ್ಲಿ ರೈತರಬೃಹತ್‌ಪ್ರತಿಭಟನೆಯಲ್ಲಿಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ರೈತರು ನಿರೀಕ್ಷೆಗೂ ಮೀರಿ ಒಗ್ಗಟ್ಟು ಪ್ರದರ್ಶನ ಕಂಡುಬಂದಿತು.



ಈ ಒಂದು ಹೋರಾಟದಲ್ಲಿ ಪೂಜ್ಯ ಶ್ರೀ ಮರಿಬಸವರಾಜ ದೇಸಿಕೇಂದ್ರ ಮಹಾಸ್ವಾಮಿಗಳು ಉಟಕನೂರು, ಪೂಜ್ಯಶ್ರೀ ಬಸವಪ್ರಸಾದ ಶರಣರು ಇರಕಲ್ ಮಠ, ಪೂಜ್ಯಶ್ರೀ ದಂಡಗುಂಡಪ ತಾತ ಜಂಗಮರಳ್ಳಿ ಆಶೀರ್ವಾದದೊಂದಿಗೆ ಜೊತೆಗೆ ಮರಿಗೌಡ ಮಾಲಿಪಾಟೀಲ್ ಹಾಗೂ ಪಾಟೀಲ್ ನ್ಯೂಜ ಚಾನೆಲ್ ಮತ್ತು ಅನೇಕ ರೈತ ಮುಖಂಡರ ಸಹಯೋಗದಲ್ಲಿ ಹಮ್ಮಿಕೊಂಡಿದ್ದು , ರೈತರು ಬೆಳೆದ ಭತ್ತಕ್ಕೆ ಡಿಸೆಂಬರ್ 15ರವರೆಗೆ ನೀರು ಹರಿಸಿ, ಒಳ್ಳೆಯ ಗೇಜು ಮತ್ತು ತ್ರಡ್ಡನ್ನು ಕಾಪಾಡಿ ರೈತರಿಗೆ ಅನುಕೂಲ ಮಾಡಬೇಕು, ಹಾಗೆ ರೈತರ ಮೇಲೆ ದಾಖಲಾದ ಕೇಸುಗಳನ್ನು ಹಿಂದಕ್ಕೆ ಪಡೆಯಬೇಕು, ಇಲ್ಲವಾದರೆ ಮತ್ತಷ್ಟು ಉಗ್ರವಾದ ಹೋರಾಟವನ್ನು ಮಾಡಬೇಕಾಗ್ತದೆ ಎಂದು ಮಸ್ತಾನ್ ನಾಯಕ ರೈತ ಸಂಘದ ರಾಜ್ಯಾಧ್ಯಕ್ಷರು ಹಾಗೂ ಎಲ್ಲಾ ರೈತರು ಸೇರಿ ಸ್ಥಳದಲ್ಲಿದ್ದ ತಹಸಿಲ್ದಾರ ಮಂಜುನಾಥ ಭೂಗವತಿ, ನೀರಾವರಿ ಇಲಾಖೆ ಇಇ ವಿಜಯಲಕ್ಷ್ಮಿ ಪಾಟೀಲ ಅವರಿಗೆ ಎಚ್ಚರಿಕೆಯನ್ನು ನೀಡಿದರು.

ಹಾಲಾಪುರದಲ್ಲಿ ಮೊಟ್ಟ ಮೊದಲ ಬಾರಿಗೆ ಸಾವಿರಾರು ರೈತರು ಸೇರಿ ಒಗ್ಗಟ್ಟು ಪ್ರದರ್ಶನ ವಿಶೇಷತೆಯಾಗಿತ್ತು , ಸೂಕ್ತ ಬಂದೋಬಸ್ತ್ ವ್ಯವಸ್ಥೆಯನ್ನು ಸಿರಿವಾರ ಹಾಗೂ ಮಾನ್ವಿ ಸರ್ಕಲ್ ಪೊಲೀಸ್ ಇನ್ಸ್ಪೆಕ್ಟರ್ , ಕವಿತಾಳ್ ಪಿಎಸ್ಐ ಹಾಗೂ ರಿಸರ್ವ್ ಪೊಲೀಸ್ ಸೇರಿ ರಕ್ಷಣೆ ನೀಡಿದರು. ಈ ಸಂದರ್ಭದಲ್ಲಿ ಹಾಲಾಪುರ ಆಗ ಸುತ್ತುಮುತ್ತಲಿನ ರೈತ ಮುಖಂಡರು, ರೈತರು ಸಹಸ್ರ ಸಂಖ್ಯೆಯಲ್ಲಿ ಭಾಗಿಯಾಗಿದ್ದರು

ಸಂಸ್ಕೃತಿಯ ಸಡಗರ: ಬೆಳಗೋಡ್ ಹಾಳ್‌ನಲ್ಲಿ 101 ಮುತ್ತೈದೆಯರಿಗೆ ಉಡಿ ತುಂಬಿದ ಶಾಸಕರ ಪತ್ನಿ ಶ್ರೀದೇವಿ ಗಣೇಶ್

❑ ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಪ್ರತಿಯೊಬ್ಬ ಮಹಿಳೆಗೂ ತನ್ನ ತವರು ಮನೆಯಿಂದ ಬರುವ ಸೀರೆ ಮತ್ತು ಉಡಿ ತುಂಬುವ ಶಾಸ್ತ್ರ ಕೇವಲ ಸಂಪ್ರದಾಯವಲ್ಲ, ಅದೊಂದು ಭಾವನಾತ್ಮಕ ಬೆಸುಗೆ. ಮಹಿಳೆಯೇ ಇಡೀ ಕುಟುಂಬದ ಆಧಾರ ಸ್ತಂಭವಾಗಿದ್ದು, ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ದೇಶದ ಅತ್ಯುತ್ತಮ ಪ್ರಜೆಯನ್ನಾಗಿ ರೂಪಿಸುವ ಗುರುತರ ಜವಾಬ್ದಾರಿ ಅವಳ ಮೇಲಿದೆ ಎಂದು ಕಂಪ್ಲಿ ಶಾಸಕ ಜೆ.ಎನ್.ಗಣೇಶ್ ಅವರ ಧರ್ಮಪತ್ನಿ ಶ್ರೀಮತಿ ಶ್ರೀದೇವಿ ಜೆ.ಎನ್.ಗಣೇಶ್ ಅಭಿಪ್ರಾಯಪಟ್ಟರು.



ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲೂಕಿನ ನಂ.10 ಮುದ್ದಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೆಳಗೋಡ್ ಹಾಳ್ ಗ್ರಾಮದ ಶ್ರೀ ಕೆಂಚಮ್ಮ ದೇವಸ್ಥಾನದ ಮುಂಭಾಗದಲ್ಲಿ ಈ ಭವ್ಯ ಕಾರ್ಯಕ್ರಮ ಜರುಗಿತು. ದಿವಂಗತ ಜೆ.ಎನ್. ವೆಂಕೋಬಣ್ಣ ಹೊಸಪೇಟೆ ಅವರ ಪುಣ್ಯ ಸ್ಮರಣೆಯ ಆಶೀರ್ವಾದದೊಂದಿಗೆ, ಕಂಪ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಜೆ.ಎನ್.ಗಣೇಶ್ ಫೌಂಡೇಶನ್ ಹಾಗೂ ಯುವ ಮುಖಂಡ ದೊಡ್ಡ ಬಸವರಾಜ ಬಡಗಿ ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಉಚಿತ ಸಾಮೂಹಿಕ ವಿವಾಹ ಮಹೋತ್ಸವದ ಅಂಗವಾಗಿ ಈ ಸಡಗರದ ಕಾರ್ಯಕ್ರಮ ಆಯೋಜಿಸಲಾಗಿತ್ತು. ಶುಭ ಶುಕ್ರವಾರದ ಸಾಯಂಕಾಲದ ಸುಸಂದರ್ಭದಲ್ಲಿ 101 ಜನ ಮುತ್ತೈದೆಯರಿಗೆ ಉಚಿತ ಸೀರೆ ವಿತರಿಸಿ, ಉಡಿ ತುಂಬುವ ಮಂಗಳಮಯ ಕಾರ್ಯಕ್ರಮಕ್ಕೆ ಶ್ರೀಮತಿ ಶ್ರೀದೇವಿ ಚಾಲನೆ ನೀಡಿದರು.

ಬೆಳಗೋಡ್ ಹಾಳ್ ಗ್ರಾಮಕ್ಕೆ ಇದೇ ಮೊದಲ ಬಾರಿಗೆ ಭೇಟಿ ನೀಡಿರುವ ಬಗ್ಗೆ ಸಂತಸ ವ್ಯಕ್ತಪಡಿಸಿದ ಶ್ರೀದೇವಿ ಗಣೇಶ್, "ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಉಡಿ ತುಂಬುವ ಪದ್ಧತಿಗೆ ವಿಶೇಷ ಗೌರವವಿದೆ. ಇಂತಹ ಶ್ರೇಷ್ಠ ಸಂಪ್ರದಾಯವನ್ನು ಗ್ರಾಮೀಣ ಭಾಗದಲ್ಲಿ ಇಂದಿಗೂ ಜೀವಂತವಾಗಿಟ್ಟಿರುವುದು ಹೆಮ್ಮೆಯ ಸಂಗತಿ. ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ನೈತಿ-ಕ ಮೌಲ್ಯಗಳನ್ನು ಅಳವಡಿಸಿಕೊಂಡಾಗ ಮಾತ್ರ ಒಂದು ಸುಂದರ ಮತ್ತು ಸದೃಢ ಸಮಾಜ ನಿರ್ಮಾಣ ಸಾಧ್ಯ. ಮಗು ಬೆಳೆದು ದೇಶದ ಉತ್ತಮ ಪ್ರಜೆಯಾಗಬೇಕಾದರೆ ತಾಯಿಯೇ ಮೊದಲ ಗುರು" ಎಂದು ತಿಳಿಸಿದರು.

ನವೆಂಬರ್ 15ಕ್ಕೆ ಉಚಿತ ಸಾಮೂಹಿಕ ವಿವಾಹ ಮಹೋತ್ಸವ: ನಂತರ ಮಾತನಾಡಿದ ಯುವ ಮುಖಂಡ ದೊಡ್ಡ ಬಸವರಾಜ ಬಡಗಿ ಅವರು, ಬೆಳಗೋಡ್ ಹಾಳ್ ಗ್ರಾಮದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಇಂತಹ ಬೃಹತ್ ಉಚಿತ ಸಾಮೂಹಿಕ ವಿವಾಹವನ್ನು ಆಯೋಜಿಸಲಾಗುತ್ತಿದೆ. ನವೆಂಬರ್ 15ರಂದು ಈ ಕಲ್ಯಾಣ ಮಹೋತ್ಸವ ನಡೆಯಲಿದ್ದು, ಇದರ ಮುನ್ನಡೆಯಾಗಿ ಶಾಸಕರ ಧರ್ಮಪತ್ನಿ ಶ್ರೀಮತಿ ಶ್ರೀದೇವಿ ಅತ್ತಿಗೆ ರವರ ದಿವ್ಯ ಸಮ್ಮುಖದಲ್ಲಿ 101 ಮಹಿಳೆಯರಿಗೆ ಗೌರವಪೂರ್ವಕವಾಗಿ ಉಡಿ ತುಂಬುವ ಶಾಸ್ತ್ರವನ್ನು ಯಶಸ್ವಿಯಾಗಿ ನೆರವೇರಿಸಲಾಗಿದೆ ಎಂದರು.

ಕಾರ್ಯಕ್ರಮಕ್ಕೆ ಆಗಮಿಸಿದ್ದ ಶಾಸಕರ ಪತ್ನಿ ಶ್ರೀಮತಿ ಶ್ರೀದೇವಿ ಗಣೇಶ್ ಅವರನ್ನು ಗ್ರಾಮದ ಮಹಿಳೆಯರು ಶಾಲು ಹೊದಿಸಿ, ಮಾಲಾರ್ಪಣೆ ಮಾಡಿ ಅತ್ಯಂತ ಪ್ರೀತಿಯಿಂದ ಸನ್ಮಾನಿಸಿ ಗೌರವಿಸಿದರು. ಈ ಮಂಗಳಕರ ಪ್ರಸಂಗದಲ್ಲಿ ಪ್ರಮುಖ ಮುಖಂಡರಾದ ವೈ.ವಿರುಪಣ್ಣ, ನಬೀ ಸಾಬ್, ಕೆ.ಗಂಗಾಧರ, ರಾಮಕೃಷ್ಣ, ರೇಣುಕಪ್ಪ, ಸುಭಾನ್, ಮಹಾಂತೇಶ, ದುರುಗಪ್ಪ, ರವಿಕುಮಾರ, ಮರಿಸ್ವಾಮಿ, ಬಡಿಗಿ ದುರುಗಪ್ಪ, ಬಡಗಿ ಹನುಮಂತಪ್ಪ,ದೇವರಾಜ್, ಗುರುಬಸವ, ಸಣ್ಣ ದುರುಗಪ್ಪ, ಲಕ್ಷ್ಮಣ, ಮಂಜುನಾಥ, ಹಾಗೂ ಮಹಿಳಾ ಮುಖಂಡರಾದ ಶಂಕ್ರಮ್ಮ, ಮರಿಯಮ್ಮ, ಜಿನಿಗಮ್ಮ, ಲಕ್ಷ್ಮಿ, ಶಾರದಮ್ಮ, ಮಲ್ಲಮ್ಮ, ಹುಲಿಗೆಮ್ಮ, ಹನುಮಂತಮ್ಮ, ರಾಧಾ, ರಾಧಿಕಾ, ಪಾರ್ವತಿ, ಮಂಜುಳಾ, ಮರಿಯಮ್ಮ, ಶರಣಮ್ಮ, ಹನುಮಂತಮ್ಮ ಸೇರಿದಂತೆ ನೂರಾರು ಗ್ರಾಮೀಣ ಮಹಿಳೆಯರು, ಯುವಕರು ಮತ್ತು ಮುಗ್ಧ ಮಕ್ಕಳು ಭಾಗವಹಿಸಿ ಕಾರ್ಯಕ್ರಮದ ಚಂದವನ್ನು ಹೆಚ್ಚಿಸಿದರು.

ಸಾಹಿತ್ಯ ಸಿಂಚನ

ನವ ಕರ್ನಾಟಕ ಉದಯೋತ್ಸವ

ಕನ್ನಡಿಗರ ಹೃದಯಗಳು ಒಂದಾದ ಈ ಸಮಯ ।
ಸಿರಿಗನ್ನಡದ ಚೆಲುವಿನಲ್ಲಿ ಆಯಿತು ನವ ಕರ್ನಾಟಕದ ಉದಯ ॥

ಕೆಚ್ಚೆದೆಯ ಕನ್ನಡಿಗರ ರಕ್ತದಲಿ ಸ್ವಾಭಿಮಾನವು ಉಕ್ಕಿ ಹರಿಯಿತು ।
ಹೋರಾಟಗಾರರ ಮನದಲಿ ಶುಭ ಪ್ರೇಮದ ಹೊಳೆಯು ಹರಿಯಿತು ॥

ಹಳದಿ ಕುಂಕುಮದ ಬಣ್ಣವು ಬೆಳಗಿತು ಕನ್ನಡದ ಕೀರ್ತಿ ।
ಕಾವೇರಿಯಿಂದ ಕೃಷ್ಣೆಯ ತನಕ ಮಾರ್ದನಿಸಿತು ಜಯಘೋಷದ ಕೀರ್ತಿ ॥

ಹೆಚ್ಚಿತು ಏಕೀಕರಣದ ಕಾವು ನಾಡು-ನುಡಿಯ ಅಭಿಮಾನಿಗಳಲ್ಲಿ ।
ಹರಿದು ಹಂಚಿಹೋಗಿದ್ದ ಪ್ರಾಂತಗಳು ಒಂದಾದವು ಕರ್ನಾಟಕದಲ್ಲಿ ॥

ದಶ ದಿಕ್ಕುಗಳಿಂದ ಹರಿದುಬಂದ ಕನ್ನಡದ ಪ್ರೀತಿಯ ಮಹಾಪೂರ ।
ನವೆಂಬರ್ ಒಂದರ ಈ ಸುದಿನದಲಿ ಕಾಣಿಸಿತು ನವ ನಾಡಿನ ಶೃಂಗಾರ ॥

ಕನ್ನಡ ತಾಯಿಯ ಮಡಿಲಲ್ಲಿದೆ ಎಲ್ಲರೂ ಒಂದೇ ಎಂಬ ಭಾವ ।
ಜಾತಿ ಮತಗಳ ಭೇದವಿಲ್ಲದೆ ತೋರಿಸೋಣ ಜಗಕೆ ಪ್ರೀತಿಯ ಭಾವ ॥

ಕನ್ನಡಿಗರೆಲ್ಲರೂ ಒಂದಾಗಿ ಕಟ್ಟೋಣ ಸುಂದರ ನಾಡನ್ನು ।
ಮುಂದಿನ ಪೀಳಿಗೆಗೆ ಮಾದರಿಯಾಗಿ ಉಳಿಸೋಣ ತಾಯ್ನಾಡನ್ನು ॥

ಕೈ-ಕೈ ಹಿಡಿದು ನಾವೆಲ್ಲರೂ ನಡೆವೆಯೋಣ ಒಗ್ಗಟ್ಟಿನ ಹಾದಿಯಲ್ಲಿ ।
ಕರುನಾಡ ಧ್ವಜವು ಹಾರಲಿ ಗಗನದಿ ಬೆಳಗಲಿ ಶಾಂತಿಯ ಬೆಳಕು ಇಲ್ಲಿ ॥

ಡಾ ಮಹೇಂದ್ರ ಕುರ್ಡಿ

ರಾಷ್ಟ್ರೀಯ ಕ್ಯಾನ್ಸರ್ ಜನಜಾಗೃತಿ ಕಾರ್ಯಕ್ರಮ

ಕ್ಯಾನ್ಸರ್‌ನ ಅಪಾಯಕಾರಿ ಲಕ್ಷಣಗಳನ್ನು ನಿರ್ಲಕ್ಷಿಸಬೇಡಿ: ವೈದ್ಯಾಧಿಕಾರಿ ಡಾ. ಉಮ್ಮೈ ಅಮೇರಾ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕ್ಯಾನ್ಸರ್‌ನ ಆರಂಭಿಕ ಲಕ್ಷಣಗಳನ್ನು ನಿರ್ಲಕ್ಷಿಸದೆ, ಸಮಯಕ್ಕೆ ಸರಿಯಾಗಿ ತಪಾಸಣೆ ಮಾಡಿಸಿಕೊಂಡು ಚಿಕಿತ್ಸೆ ಪಡೆಯಬೇಕು ಎಂದು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾದ ವೈದ್ಯಾಧಿಕಾರಿ ಡಾ. ಉಮ್ಮೈ ಅಮೇರಾ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಸಾಂಕ್ರಾಮಿಕ ರೋಗಗಳ ವಿಭಾಗ ರಾಯಚೂರು, ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಮತ್ತು ಸನ್‌ರೈಸ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳ ಸಂಯುಕ್ತ ಆಶ್ರಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾದಲ್ಲಿ ರಾಷ್ಟ್ರೀಯ ಕ್ಯಾನ್ಸರ್ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ವೈದ್ಯಾಧಿಕಾರಿ ಡಾ. ಉಮ್ಮೈ ಅಮೇರಾ ಅವರು, ಪ್ರತಿವರ್ಷ ರಾಷ್ಟ್ರೀಯ ಕ್ಯಾನ್ಸರ್ ಜಾಗೃತಿ ದಿನವನ್ನು ಆಚ-'ರಿಸುವ ಮೂಲಕ ಜನರಲ್ಲಿ ಕ್ಯಾನ್ಸರ್ ಕು-ರಿತು ಅರಿವು ಮೂಡಿಸಲಾಗುತ್ತದೆ. ದೇಹದಲ್ಲಿ ಜೀವಕೋಶಗಳು ಅನಿಯಂತ್ರಿತವಾಗಿ ಬೆಳೆಯುತ್ತಾ ದೇಹದ ಇತರ ಭಾಗಗಳಿಗೆ ಹರಡುವ ಸ್ಥಿತಿಯನ್ನು ಕ್ಯಾನ್ಸರ್ ಎಂದು ಕರೆಯಲಾಗುತ್ತದೆ.

ನಿರಂತರ ಆಯಾಸ, ದಣಿವು, ದೇಹದ ತೂಕ ಕಡಿಮೆಯಾಗುವುದು, ಪದೇಪದೇ ಜ್ವರ ಬರುವುದು, ಮಲವಿಸರ್ಜನೆಯಲ್ಲಿ ಏರುಪೇರು, ಕಾರಣವಿಲ್ಲದೆ ರಕ್ತಸ್ರಾವವಾಗುವುದು ಹಾಗೂ ದೇಹದ ವಿವಿಧ ಭಾಗಗಳಲ್ಲಿ ಗಡ್ಡೆಗಳು ಕಾಣಿಸಿಕೊಳ್ಳುವುದು ಕ್ಯಾನ್ಸರ್‌ನ ಎಚ್ಚ-ರಿಕೆಯ ಲಕ್ಷಣಗಳಾಗಿರಬಹುದು. ಇಂತಹ ಲಕ್ಷಣಗಳು ಕಂಡುಬಂದರೆ ನಿರ್ಲಕ್ಷಿಸದೆ ವೈದ್ಯಕೀಯ ತಪಾಸಣೆ ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.

ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು, ಪುರುಷರಲ್ಲಿ ಬಾಯಿ, ಅನ್ನನಾಳ, ಶ್ವಾಸಕೋಶ ಹಾಗೂ ಹೊಟ್ಟೆಯ ಕ್ಯಾನ್ಸರ್‌ಗಳು ಕಂಡುಬರುವ ಸಾಧ್ಯತೆ ಹೆಚ್ಚಾಗಿದ್ದು, ಮಹಿಳೆಯರಲ್ಲಿ ಸ್ತನ, ಗರ್ಭಕಂಠ ಹಾಗೂ ಬಾಯಿ ಕ್ಯಾನ್ಸರ್‌ಗಳ ಬಗ್ಗೆ ಹೆಚ್ಚಿನ ಜಾಗೃತಿ ಅಗತ್ಯವಾಗಿದೆ ಎಂದರು.

ಕ್ಯಾನ್ಸರ್‌ನ ಪ್ರಮುಖ ಎಚ್ಚರಿಕೆಯ ಲಕ್ಷಣಗಳಾದ ವಾಸಿಯಾಗದ ಗಾಯ, ನಿಲ್ಲದ ರಕ್ತಸ್ರಾವ, ಮಲ ಮತ್ತು ಮೂತ್ರ ವಿಸರ್ಜನೆಯಲ್ಲಿ ಬದಲಾವಣೆ, ಎದೆ ಅಥವಾ ದೇಹದ ಇತರ ಭಾಗಗಳಲ್ಲಿ ಗಡ್ಡೆ ಕಾಣಿಸಿಕೊಳ್ಳುವುದು, ಆಹಾರ ನುಂಗಲು ತೊಂದರೆಯಾಗುವುದು, ಆಹಾರ ಜೀರ್ಣವಾಗದಿರುವುದು, ಚರ್ಮದ ಮೇಲಿನ ಮಚ್ಚೆ ಅಥವಾ ಗಡ್ಡೆಗಳಲ್ಲಿ ಬದಲಾವಣೆ, ದೀರ್ಘಕಾಲದ ಕೆಮ್ಮು ಹಾಗೂ ಗಂಟಲು ಕಟ್ಟುವಿಕೆ ಮುಂತಾದ ಲಕ್ಷಣಗಳನ್ನು ನಿರ್ಲಕ್ಷಿಸಬಾರದು. ಇಂತಹ ಲಕ್ಷಣಗಳು ಕಂಡುಬಂದ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ತಪಾಸಣೆ ಮಾಡಿಸಿಕೊಳ್ಳಬೇಕು. ಆರಂಭಿಕ ಹಂತದಲ್ಲಿಯೇ ಕ್ಯಾನ್ಸರ್ ಪತ್ತೆಯಾದರೆ ಸೂಕ್ತ ಚಿಕಿತ್ಸೆಯಿಂದ ಗುಣಮುಖರಾಗುವ ಸಾಧ್ಯತೆ ಹೆಚ್ಚಿರುತ್ತದೆ. ಆದ್ದರಿಂದ ಸಾರ್ವಜನಿಕರು ಆರೋಗ್ಯದ ಬಗ್ಗೆ ಜಾಗರೂಕರಾಗಿರಬೇಕು ಮತ್ತು ಕ್ಯಾನ್ಸರ್ ಕು-ರಿತು ಮೂಢನಂಬಿಕೆಗಳನ್ನು ಬಿಟ್ಟು ವೈಜ್ಞಾನಿಕ ಅರಿವು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸನ್‌ರೈಸ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು, ಫಾರ್ಮಸಿಸ್ಟ್ ಅಧಿಕಾರಿ ದೀಪು ರಾಯ್, ಪ್ರಯೋಗಾಲಯ ತಂತ್ರಜ್ಞ ಬಿಸ್ವಾಸ್ ಹಾಗೂ ಆರೋಗ್ಯ ಕೇಂದ್ರದ ಸಿಬ್ಬಂದಿ ಉಪಸ್ಥಿತರಿದ್ದರು.

ದೀಪಾವಳಿ ಹಬ್ಬಕ್ಕೆ ಕಟ್ಟುನಿಟ್ಟಿನ ನಿಯಮ: ಹಸಿರು ಪಟಾಕಿ ಮಾರಾಟಕ್ಕೆ ಮಾತ್ರ ಅವಕಾಶ ನಿಯಮ ಮೀರಿದರೆ ಲೈಸೆನ್ಸ್ ರದ್ದು!

ಪರಿಸರ ಮತ್ತು ಶಬ್ದ ಮಾಲಿನ್ಯ ತಡೆಗೆ ನಗರಾಡಳಿತದ ಕ್ರಮ । ಪಟಾಕಿ ಮಾರಾಟಗಾರರಿಗೆ ಆಯುಕ್ತರ ಖಡಕ್ ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್

ದೀಪಾವಳಿ ಹಬ್ಬದ ಸಂದರ್ಭದಲ್ಲಿ ನಗರದಲ್ಲಿ ಪರಿಸರ ಮಾಲಿನ್ಯ ಹಾಗೂ ಶಬ್ದ ಮಾಲಿನ್ಯವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ನಗರ ಆಡಳಿತ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಮಾನ್ಯ ಆಯುಕ್ತರು ನಗರದ ಪಟಾಕಿ ಮಾರಾಟಗಾರರೊಂದಿಗೆ ಸಭೆ ನಡೆಸಿ, ಸರ್ಕಾರದ ನಿಯಮಗಳು ಹಾಗೂ ಸುಪ್ರೀಂ ಕೋರ್ಟ್ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚನೆ ನೀಡಿದರು.



ಸಭೆಯಲ್ಲಿ ಮಾತನಾಡಿದ ಆಯುಕ್ತರು, ಸುಪ್ರೀಂ ಕೋರ್ಟ್ ಆದೇಶದಂತೆ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡಬೇಕು. ರಾಸಾಯನಿಕ ಪಟಾಕಿಗಳ ಮಾರಾಟಕ್ಕೆ ಅವಕಾಶವಿಲ್ಲ ಎಂದು ಸ್ಪಷ್ಟಪಡಿಸಿದರು. ಪಟಾಕಿ ಮಾರಾಟಕ್ಕೆ ಸಂಬಂಧಿಸಿದಂತೆ ಪರವಾನಗಿ ಪಡೆದ ವ್ಯಾಪಾರಿಗಳು ಮಾತ್ರ ನಿಗದಿಪಡಿಸಿದ ಸ್ಥಳಗಳಲ್ಲಿ ಅಂಗಡಿಗಳನ್ನು ತೆರೆಯಬೇಕು. ಯಾವುದೇ ಕಾರಣಕ್ಕೂ ಅನುಮತಿ ಇಲ್ಲದ ಸ್ಥಳಗಳಲ್ಲಿ ಪಟಾಕಿ ಮಾರಾಟ ಮಾಡಬಾರದು ಎಂದು ಎಚ್ಚರಿಕೆ ನೀಡಿದರು.

ಅಗ್ನಿ ಸುರಕ್ಷತೆಗೆ ವಿಶೇಷ ಆದ್ಯತೆ ಪಟಾಕಿ ಅಂಗಡಿಗಳಲ್ಲಿ ಯಾವುದೇ ಅನಾಹುತ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಪ್ರತಿಯೊಂದು ಅಂಗಡಿಯಲ್ಲೂ ಅಗತ್ಯ ಪ್ರಮಾಣದ ಮರಳು, ನೀರು ಹಾಗೂ ಅಗ್ನಿಶಾಮಕ ಉಪಕರಣಗಳನ್ನು ಕಡ್ಡಾಯವಾಗಿ ಇಟ್ಟುಕೊಳ್ಳಬೇಕು. ಅಗ್ನಿ ಸುರಕ್ಷತಾ ನಿಯಮಗಳನ್ನು ನಿರ್ಲಕ್ಷಿಸಬಾರದು ಎಂದು ಅಧಿಕಾರಿಗಳು ಸೂಚಿಸಿದರು. ನಿಗದಿತ ನಿಯಮಗಳನ್ನು ಉಲ್ಲಂಘಿಸಿ ಪಟಾಕಿ ಮಾರಾಟ ಮಾಡುವುದು ಕಂಡುಬಂದಲ್ಲಿ ಸಂಬಂಧಪಟ್ಟವರ ಪರವಾನಗಿಯನ್ನು ರದ್ದುಗೊಳಿಸುವುದರ ಜೊತೆಗೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಆಯುಕ್ತರು ಖಡಕ್ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ನಗರದ ಪಟಾಕಿ ಮಾರಾಟಗಾರರು, ಅಗ್ನಿಶಾಮಕ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು, ಉಪ ಆಯುಕ್ತರಾದ ಶ್ರೀ ಮುರಳೀಧರ, ವಲಯ ಆಯುಕ್ತರಾದ ಶ್ರೀ ಮಲ್ಲಿಕಾರ್ಜುನ ಬಿ.ಎಂ., ಶ್ರೀ ಜೈಪಾಲ್ ರೆಡ್ಡಿ ಹಾಗೂ ಆರೋಗ್ಯ ನಿರೀಕ್ಷಕರು ಉಪಸ್ಥಿತರಿದ್ದರು. ದೀಪಾವಳಿ ಹಸಿರುಪಟಾಕಿ #ಪರಿಸರಸಂರಕ್ಷಣೆ ಶಬ್ದಮಾಲಿನ್ಯ ಅಗ್ನಿಸುರಕ್ಷತೆ #ನಗರಾಡಳಿತ

ಕಂಪ್ಲಿ ಕ್ಷೇತ್ರಕ್ಕೆ ಸಿಕ್ಕಿತು ಕೋಟಿ ರೂ.ಗೂ ಅಧಿಕ ಅನುದಾನದ ಕೊಡುಗೆ: ಸಿಸಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ಜೆ.ಎನ್.ಗಣೇಶ್ ಭೂಮಿಪೂಜೆ

❑ ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದ ರಸ್ತೆಗಳ ಸಮಗ್ರ ಅಭಿವೃದ್ಧಿಯೊಂದಿಗೆ ಜನತೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದೇ ನಮ್ಮ ಮೊದಲ ಆದ್ಯತೆಯಾಗಿದೆ ಎಂದು ಶಾಸಕ ಜೆ.ಎನ್.ಗಣೇಶ್ ತಿಳಿಸಿದರು.



ಇಲ್ಲಿನ ಸ್ಥಳೀಯ ಸಕ್ಕರೆ ಕಾರ್ಖಾನೆಯ 21 ಮತ್ತು 23ನೇ ವಾರ್ಡಿನಲ್ಲಿ 2026-27ನೇ ಸಾಲಿನ ಕೆಕೆಆರ್‌ಡಿಬಿ (KKRDB) 2515 ಮ್ಯಾಕ್ರೋ ಯೋಜನೆಯಡಿ ಸುಮಾರು 1.28 ಕೋಟಿ ರೂ. ವೆಚ್ಚದ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಶನಿವಾರ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಕ್ಷೇತ್ರದ ಪ್ರತಿಯೊಂದು ರಂಗದಲ್ಲೂ ಸಾಕಷ್ಟು ಅನುದಾನ ಬಳಸಿಕೊಂಡು ರಸ್ತೆ, ಕುಡಿಯುವ ನೀರು, ಬೀದಿ ದೀಪ ಸೇರಿದಂತೆ ಹತ್ತಾರು ಅಭಿವೃದ್ಧಿ ಕಾರ್ಯಗಳನ್ನು ಹಂತ ಹಂತವಾಗಿ ಮಾಡಲಾಗುತ್ತಿದೆ. ಜನತೆಯ ಆಶೀರ್ವಾದಕ್ಕೆ ತಕ್ಕಂತೆ ಬದ್ಧತೆಯಿಂದ ಕೆಲಸ ಮಾಡುವುದು ನನ್ನ ಧ್ಯೇಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪಟ್ಟಣದ ಜಾನೂರು ರಸ್ತೆಯ 23ನೇ ವಾರ್ಡಿನ ಸೋಮಪ್ಪ ಬಡಾವಣೆಯಲ್ಲಿಯೂ ಲಕ್ಷಾಂತರ ರೂಪಾಯಿ ವೆಚ್ಚದ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಶಾಸಕರು ಅಡಿಗಲ್ಲು ಪೂಜೆ ನೆರವೇರಿಸಿದರು. ನಂ.2 ಮುದ್ದಾಪುರದಲ್ಲೂ ಚಾಲನೆ: ಸಣಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಂ.2 ಮುದ್ದಾಪುರ ಗ್ರಾಮದಲ್ಲಿ 90 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ಜೆ.ಎನ್.ಗಣೇಶ್ ಭೂಮಿ ಪೂಜೆ ಸಲ್ಲಿಸಿ, ಗ್ರಾಮೀಣ ಭಾಗದ ಸೌಕರ್ಯಗಳಿಗೂ ಒತ್ತು ನೀಡಲಾಗುವುದು ಎಂದರು. ಈ ಕಾರ್ಯಕ್ರಮಗಳಲ್ಲಿ ಪ್ರಮುಖ ಮುಖಂಡರಾದ ಕೆ.ಭಾಸ್ಕರ್‌ರೆಡ್ಡಿ, ಬಿ.ಲಕ್ಷ್ಮಣ, ರಂಗಸ್ವಾಮಿ, ಚಿಟ್ಟಿ, ಆಧಿನಾರಾಯಣ, ಮೈಮೂದ್, ಬಿ.ಶೇಖರ, ಡಿಶ್ ಪ್ರಸಾದ್, ಕರಿಬಸವನಗೌಡ, ಕೆ.ಎಸ್.ಚಾಂದ್‌ಬಾಷಾ, ಸಿ.ಆರ್.ಹನುಮಂತ, ಜಿ.ರಾಮಣ್ಣ, ಗೋಪಾಲ, ಎ.ಸಿ.ದಾನಪ್ಪ, ಆಟೋ ರಘು, ಕೊಟ್ಟಾಲ್ ವಿರೇಶ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ವಿದ್ಯಾ ಪಬ್ಲಿಕ್ ಶಾಲೆಯಲ್ಲಿ ಸಂಸ್ಥಾಪನಾ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸ್ಕೌಟ್ಸ್ ಮತ್ತು ಗೈಡ್ಸ್‌ನಿಂದ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಕಳಕಳಿ, ದೇಶಪ್ರೇಮ ಹಾಗೂ ಶಿಸ್ತು ಬದ್ಧ ಜೀವನ ಸಾಗಿಸಲು ಅನುಕೂಲವಾಗುತ್ತದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಿಂಧನೂರು ಸ್ಥಳೀಯ ಸಂಸ್ಥೆ ಅಧ್ಯಕ್ಷ ಎಸ್.ಶರಣೇಗೌಡ ಹೇಳಿದರು



ವಿದ್ಯಾ ಪಬ್ಲಿಕ್ ಶಾಲೆ, ಸಿಂಧನೂರು

ಅವರು ನಗರದ ವಿದ್ಯಾಪಬ್ಲಿಕ್ ಆಂಗ್ಲ ಮಾಧ್ಯಮ ಪಬ್ಲಿಕ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಭಾರತ್ ಸ್ಕೌಟ್ಸ್‌ನ ಸಂಸ್ಥಾಪನಾ ದಿನಾಚಾರಣೆಯನ್ನು ಉದ್ಘಾಟಿಸಿ ಮಾತನಾಡಿದರು. ಶಾಲೆಯ ಮುಖ್ಯಗುರುಮಾತೆ ಲಕ್ಷ್ಮೀ ಅವರು ಅಧ್ಯಕ್ಷತೆಯನ್ನು ವಹಿಸಿದ್ದರು. ಗೈಡ್ ಕ್ಯಾಪ್ಟನ್ ಆರತಿ, ಪಿಎಮ್‌ಶ್ರೀ ಆದರ್ಶ ಶಾಲೆಯ ಪ್ರಭಾರಿ ಮುಖ್ಯಗುರು ವೀರೇಶ ಗೋನವಾರ, ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿ ಬೀರಪ್ಪ ಶಂಭೋಜಿ, ಸ್ಕೌಟ್ ಮಾಸ್ಟರ್ ಜಡೇಶ ಉಪಸ್ಥಿತರಿದ್ದರು.

ಗಾಣದಾಳ ಗ್ರಾ.ಪಂ. ವ್ಯಾಪ್ತಿಯ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸಲು ಜನಾಭಿಪ್ರಾಯ

ಜನಾಭಿಪ್ರಾಯ ಸಂಗ್ರಹ ಸಭೆಯಲ್ಲಿ 1,662ಕ್ಕೂ ಹೆಚ್ಚು ಜನರ ಭಾಗಿ; ದೇವದುರ್ಗ ತಾಲೂಕಿಗೆ ಸೇರ್ಪಡೆ ಪರವಾಗಿ ಗ್ರಾಮಸ್ಥರ ಒಲವು

❑ ನೈಜ್ಯ ದೆಸೆ ನ್ಯೂಸ್

ಗಾಣದಾಳ: ರಾಯಚೂರು ಜಿಲ್ಲೆಯ ಅರಕೇರಾ ತಾಲೂಕು ವ್ಯಾಪ್ತಿಗೆ ಒಳಪಡುವ ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಾಣದಾಳ, ಕಮಲದಿನ್ನಿ, ಕಕ್ಕಲದೊಡ್ಡಿ ಹಾಗೂ ಸುಣ್ಣದಕಲ್ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಬೇಕೆಂಬ ಬೇಡಿಕೆಗೆ ಗ್ರಾಮಸ್ಥರಿಂದ ವ್ಯಾಪಕ ಬೆಂಬಲ ವ್ಯಕ್ತವಾಗಿದೆ.

ಅರಕೇರಾ ತಹಶೀಲ್ದಾರ್ ಗ್ರೇಡ್-2 ಶ್ರೀಧರ ಪವಾರ್ ಅವರ ನೇತೃತ್ವದಲ್ಲಿ ನ. 7ರಂದು ಬೆಳಿಗ್ಗೆ 11 ಗಂಟೆಗೆ ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರ ಜನಾಭಿಪ್ರಾಯ ಸಂಗ್ರಹಿಸಲು ಸಭೆ ನಡೆಸಲಾಯಿತು. ಸಭೆಯಲ್ಲಿ 1,662ಕ್ಕೂ ಹೆಚ್ಚು ನಾಗರಿಕರು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಚುನಾವಣೆ ಬಹಿಷ್ಕಾರದ ಎಚ್ಚರಿಕೆ:

ಹೋರಾಟ ಸಮಿತಿ ಅಧ್ಯಕ್ಷ ವಸಂತಕುಮಾರ್ ಮಾತನಾಡಿ, ಗ್ರಾಮಸ್ಥರ ಜನಾಭಿಪ್ರಾಯಕ್ಕೆ ಅಧಿಕಾ-ರಿಗಳು ಮನ್ನಣೆ ನೀಡಬೇಕು. ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸದಿದ್ದರೆ ಮುಂದಿನ ದಿನಗಳಲ್ಲಿ ಚುನಾವಣೆ ಬಹಿಷ್ಕರಿಸುವುದಾಗಿ ಎಚ್ಚರಿಕೆ ನೀಡಿದರು.



ಈ ಹಿಂದೆಯೇ ಗ್ರಾಮ ಪಂಚಾಯಿತಿಯಲ್ಲಿ ನಿರ್ಣಯ:

ಗಾಣದಾಳ ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ 24-03-2025ರಂದು ಈ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸುವಂತೆ ನಿರ್ಣಯ ಅಂಗೀಕರಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಇದೀಗ ಗ್ರಾಮಸಭೆಯಲ್ಲಿಯೂ ಗ್ರಾಮಸ್ಥರ ಅಭಿಪ್ರಾಯಗಳನ್ನು ಸಂಗ್ರಹಿಸಿ, ಸಹಿ ಪಡೆದು ನಡಾವಳಿ ಸಿದ್ಧಪಡಿಸಲಾಯಿತು. ಸಭೆಯಲ್ಲಿ ಅರಕೇರಾ ತಹಶೀಲ್ದಾರ್ ಗ್ರೇಡ್-2 ಶ್ರೀಧರ ಪವಾರ್, ಗಾಣದಾಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಂಗಮ್ಮ, ಕಾರ್ಯದರ್ಶಿ ಯಮನೂರಪ್ಪ, ಜಾಲಹಳ್ಳಿ ಪೊಲೀಸ್ ಠಾಣೆಯ ಪಿಎಸ್ಐ ವೈಶಾಲಿ ಸೇರಿದಂತೆ ನಾಲ್ಕು

ಈ ಸಂದರ್ಭದಲ್ಲಿ ಕೈ ಎತ್ತುವ ಮೂಲಕ ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸುವ ಬೇಡಿಕೆಗೆ ತಮ್ಮ ಬೆಂಬಲ ಸೂಚಿಸಿದರು.

ಜನಾಭಿಪ್ರಾಯ ಸಂಗ್ರಹಿಸಿದ ಬಳಿಕ ಮಾತನಾಡಿದ ತಹಶೀಲ್ದಾರ್ ಶ್ರೀಧರ ಪವಾರ್, ಗ್ರಾಮಸ್ಥರ ಅಭಿಪ್ರಾಯಗಳನ್ನು ಸಭೆಯ ನಡಾವಳಿಯೊಂದಿಗೆ ಮೇಲಧಿಕಾ-ರಿಗಳಿಗೆ ಸಲ್ಲಿಸಲಾಗುವುದು ಎಂದು ತಿಳಿಸಿದರು. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಸೆಕ್ಷನ್ 4(2)(ಎ) ಹಾಗೂ ಸಂಬಂಧಿತ ಕಾನೂನು ನಿಯಮಗಳ ಅನ್ವಯ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸುವಂತೆ ಗ್ರಾಮಸ್ಥರು ಅಭಿಪ್ರಾಯ ವ್ಯಕ್ತಪಡಿಸಿದರು.

ಮಹಿಳೆಯರಿಗೂ ತಾಲೂಕು ಕೇಂದ್ರದ ಪ್ರಯಾಣದ ಸಮಸ್ಯೆ:

ಮಹಿಳೆಯರಾದ ಪಾರ್ವತಿ ಸೇರಿದಂತೆ ಹಲವರು ಮಾತನಾಡಿ, ಸಮರ್ಪಕ ಸಾರಿಗೆ ಸೌಲಭ್ಯವಿಲ್ಲದೆ ಅರಕೇರಾಕ್ಕೆ ತೆರಳಿ ಬರಲು ಕಷ್ಟವಾಗುತ್ತಿದೆ. ಮಹಿಳೆಯರು ಹಾಗೂ ವೃದ್ಧರ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ಅರಕೇರೆಯಿಂದ ದೂರ, ಜಾಲಹಳ್ಳಿಯಿಂದ ಸಮೀಪ:

ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳು ಅರಕೇರಾ ತಾಲೂಕು ಕೇಂದ್ರದಿಂದ ಸುಮಾರು 40ರಿಂದ 60 ಕಿ.ಮೀ. ದೂರದಲ್ಲಿವೆ. ಇದರಿಂದ ಸಾರ್ವಜನಿಕರು, ರೈತರು, ಮಹಿಳೆಯರು ಹಾಗೂ ವೃದ್ಧರು ಸರ್ಕಾರಿ ಕೆಲಸಗಳಿಗಾಗಿ ತಾಲೂಕು ಕಚೇರಿಗೆ ತೆರಳಿ ಬರಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಗ್ರಾಮಸ್ಥರು ತಿಳಿಸಿದರು

ಮುಖಂಡರಿಂದ ತಾಲೂಕು ಮರುಸೇರ್ಪಡೆಗೆಒತ್ತಾಯ: ಸಭೆಯಲ್ಲಿ ಮಾತನಾಡಿದ ರಂಗಣ್ಣ ಕೋಲ್ಕಾರ್ ಅವರು, ಅರಕೇರಾ ತಾಲೂಕು ರಚನೆಯ ಪ್ರಕ್ರಿಯೆ ಅವೈಜ್ಞಾನಿಕವಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಗಿರಿಯಪ್ಪ ಪೂಜಾರಿ ಅವರು, ಗಾಣದಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳನ್ನು ಕೂಡಲೇ ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ವಿರುದ್ಧವಾಗಿ ಈ ಗ್ರಾಮಗಳು ದೇವದುರ್ಗ ತಾಲೂಕು ಜಾಲಹಳ್ಳಿ ಹೋಬಳಿಗೆ ಸಮೀಪದಲ್ಲಿವೆ. ಗಾಣದಾಳದಿಂದ ಜಾಲಹಳ್ಳಿಗೆ ಸುಮಾರು 6 ಕಿ.ಮೀ., ಕಮಲದಿನ್ನಿಯಿಂದ 3 ಕಿ.ಮೀ., ಕಕ್ಕಲದೊಡ್ಡಿಯಿಂದ 4 ಕಿ.ಮೀ. ಹಾಗೂ ಸುಣ್ಣದಕಲ್‌ನಿಂದ ಸುಮಾರು 10 ಕಿ.ಮೀ. ಅಂತರವಿದೆ ಎಂದು ಸಭೆಯಲ್ಲಿ ವಿವರಿಸಲಾಯಿತು. ಜಾಲಹಳ್ಳಿ ಹೋಬಳಿಯಲ್ಲಿ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪೊಲೀಸ್ ಠಾಣೆ, ಪಶು ಚಿಕಿತ್ಸಾಲಯ, ಶಾಲಾ-ಕಾಲೇಜುಗಳು, ಬ್ಯಾಂಕ್‌ಗಳು ಹಾಗೂ ವಿದ್ಯುತ್ ಕೇಂದ್ರ ಸೇರಿದಂತೆ ವಿವಿಧ ಮೂಲಸೌಕರ್ಯಗಳಿವೆ. ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿಗಳ ಸಂಪರ್ಕವೂ ಅನುಕೂಲಕರವಾಗಿದೆ. ಹೀಗಾಗಿ ಈ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರ್ಪಡೆಗೊಳಿಸುವುದು ಸಾರ್ವಜನಿಕರ ಅನುಕೂಲದ ದೃಷ್ಟಿಯಿಂದ ಸೂಕ್ತ ಎಂದು ಗ್ರಾಮಸ್ಥರು ಒತ್ತಾಯಿಸಿದರು.

ಸಿದ್ದನಗೌಡ ಮೂಡಲಗುಂಡ ಅವರು ಮಾತನಾಡಿ, ಅವೈಜ್ಞಾನಿಕ ವರದಿಗಳ ಆಧಾರದ ಮೇಲೆ ತಾಲೂಕು ರಚನೆ ಮಾಡಲಾಗಿದೆ ಎಂಬ ಆಕ್ಷೇಪವಿದೆ. ಗ್ರಾಮಸ್ಥರ ಅನುಕೂಲಕ್ಕಾಗಿ ಈ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಸೇರಿಸಬೇಕು ಎಂದರು.

ನೇಮಕಾತಿ ಪ್ರಕಟಣೆ

ಇಂಡಿಯನ್ ಬ್ಯಾಂಕ್ ನೇಮಕಾತಿ 2026 ? 1500 ಅಪ್ರೆಂಟಿಸ್ (Apprentice) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ.

ಇಂಡಿಯನ್ ಬ್ಯಾಂಕ್ ನೇಮಕಾತಿ 2026: 1500 ಅಪ್ರೆಂಟಿಸ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಇಂಡಿಯನ್ ಬ್ಯಾಂಕ್ ತನ್ನ ನವೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅಪ್ರೆಂಟಿಸ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಕೋರಿದೆ. ಅಖಿಲ ಭಾರತ ಮಟ್ಟದಲ್ಲಿ ಸರ್ಕಾರಿ ವಲಯದಲ್ಲಿ ವೃತ್ತಿಜೀವನವನ್ನು ರೂಪಿಸಿಕೊಳ್ಳಲು ಬಯಸುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 25–ನವೆಂಬರ್–2026 ರಂದು ಅಥವಾ ಅದಕ್ಕೂ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಸಂಸ್ಥೆಯ ಹೆಸರು: ಇಂಡಿಯನ್ ಬ್ಯಾಂಕ್ (Indian Bank) ಹುದ್ದೆಗಳ ಸಂಖ್ಯೆ: 1500 ಉದ್ಯೋಗ ಸ್ಥಳ: ಅಖಿಲ ಭಾರತ (ಭಾರತದಾದ್ಯಂತ) ಹುದ್ದೆಯ ಹೆಸರು: ಅಪ್ರೆಂಟಿಸ್ (Apprentice) ವೇತನ: ತಿಂಗಳಿಗೆ ರೂ. 12,300 ? 15,000/– ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25–ನವೆಂಬರ್–2026. ಅಧಿಕೃತ ವೆಬ್‌ಸೈಟ್: indianbank.in.

ಯಾದಗಿರಿ ಕಾರು ಅಪಘಾತದಲ್ಲಿ ನಾಲ್ವರು ಸಾವು

❏ ನೈಜ್ಯ ದೆಸೆ ನ್ಯೂಸ್

ಯಾದಗಿರಿ: ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಇಬ್ರಾಹಿಂ ಡಿಬಿ–ಎಲ್ ಕ್ಯಾಂಪ್ ಬಳಿ ರಾತ್ರಿ ಸಂಭವಿಸಿದ ಕಾರು ಅಪಘಾತದಲ್ಲಿ ನಾಲ್ವರು ಮೃತಪಟ್ಟಿದ್ದಾರೆ.ಯಾದಗಿರಿಯ ನಿವಾಸಿಗಳಾದ ಗುರುರಾಜ್ (29), ರೆಡ್ಡಿ ರಾಥೋಡ್ (33), ಗೋವಿಂದ ಚವ್ಹಾಣ್ (28) ಮತ್ತು ಕುಮಾರ್ ರಾಥೋಡ್ (26) ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ.ನಕ್ಷೆಗಳನ್ನು ನೋಡಿ



ರಾತ್ರಿ 11.30 ರ ಸುಮಾರಿನಲ್ಲಿ ಚೆನ್ನೈ–ಸೂರತ್ ಎಕ್ಸ್ ಪ್ರೆಸ್ ಹೈವೇಯಲ್ಲಿ ಕಾರು ಜೇವರ್ಗಿಯಿಂದ ಯಾದಗಿರಿ ಕಡೆಗೆ ಹೋಗುತ್ತಿದ್ದಾಗ ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ಗೋಡೆಗೆ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಮೃತಪಟ್ಟಿದ್ದಾರೆ. ಸುದ್ದಿ ತಿಳಿದ ಶಹಾಪುರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.ಈ ಅಪಘಾತಕ್ಕೆ ಅತೀ ವೇಗವೇ ಕಾರಣ ಎಂದು ಪೊಲೀಸರ ತನಿಖೆಯಿಂದ ತಿಳಿದುಬಂದಿದೆ.

ಪ್ರಧಾನಿಯನ್ನು ಆಹ್ವಾನಿಸಿದ್ದು ನಾವು, ಬಿಜೆಪಿಗೂ ಮೆಟ್ರೊ ಉದ್ಘಾಟನೆಗೂ ಏನು ಸಂಬಂಧ. : ಸಿಎಂ ಡಿಕೆಶಿ

❏ ನೈಜ್ಯ ದೆಸೆ ನ್ಯೂಸ್

ಕನಕಪುರ: ಬೆಂಗಳೂರಿನ ಮೆಟ್ರೊ ಗುಲಾಬಿ ಮಾರ್ಗದ ಉದ್ಘಾಟನೆಗೆ ನ.13ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ನಮ್ಮ ಸರ್ಕಾರವೇ ಆಹ್ವಾನಿಸಿದೆ. ಆದರೆ ಕೆಲವರು ತಾವೇ ಆಹ್ವಾನಿಸಿರುವುದಾಗಿ ಪ್ರಚಾರ ಪಡೆಯುತ್ತಿದ್ದಾರೆ. ಬಿಜೆಪಿಗೂ ಮೆಟ್ರೊ ಉದ್ಘಾಟನೆಗೂ ಏನು ಸಂಬಂಧ? ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶ್ನಿಸಿದರು.ನಕ್ಷೆಗಳನ್ನು ನೋಡಿ ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೆಟ್ರೊ ಅಭಿವೃದ್ಧಿಗೆ ಸಾರ್ವಜನಿಕರ ಹಣದ ಜೊತೆಗೆ ಸಾಲವನ್ನೂ ಬಳಸಲಾಗಿದೆ. ಈ ಸಂಬಂಧ ಕೆಲವು ಪ್ರಮುಖ ವಿಚಾರಗಳನ್ನು ನ.13ರಂದು ಪ್ರಧಾನಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದರು.



ರಾಹುಲ್ ಗಾಂಧಿ ಸಭೆಯಲ್ಲಿ ಭಾಗಿ: ದೆಹಲಿಯಲ್ಲಿ ರಾಹುಲ್ ಗಾಂಧಿಯವರು ಕೆಪಿಸಿಸಿ ಅಧ್ಯಕ್ಷರು ಹಾಗೂ ಶಾಸಕಾಂಗ ಪಕ್ಷದ ನಾಯಕರ ಸಭೆ ಕರೆದಿದ್ದು, ಸಭೆಯಲ್ಲಿ ಪಾಲ್ಗೊಳ್ಳಲು ತೆರಳುತ್ತಿರುವುದಾಗಿ ತಿಳಿಸಿದರು. ಸಭೆ ಸುಮಾರು ಒಂದೂವರೆ ಗಂಟೆ ನಡೆಯಲಿದೆ. ದೀಪಾವಳಿ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ಬೇರೆ ಯಾರನ್ನೂ ಭೇಟಿ ಮಾಡುವುದಿಲ್ಲ ಎಂದರು.

ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಪ್ರಯತ್ನ: ಕಬ್ಬು ಬೆಳೆಗಾರರು ಹೋರಾಟ ಹಿಂಪಡೆದಿರುವ ಕುರಿತು ಪ್ರತಿಕ್ರಿಯಿಸಿದ ಅವರು, ರೈತರು ಪ್ರತಿಷ್ಠೆಗೆ ಮಣಿಯದೆ ಸಮಸ್ಯೆ ಪರಿಹಾರಕ್ಕೆ ಸಹಕರಿಸುವಂತೆ ಮನವಿ ಮಾಡಿದ್ದೆವು. ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿ ಹಾಗೂ ಸಚಿವರು ಚರ್ಚೆ ನಡೆಸಿದ್ದಾರೆ. ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಿಸಿದ ನ್ಯಾಯಾಲಯದ ವಿಚಾರದಲ್ಲೂ ಸರ್ಕಾರ ಅಫಿಡವಿಟ್ ಸಲ್ಲಿಸಲಿದೆ ಎಂದರು.

ಸಕ್ಕರೆ ಬೆಲೆ ನಿಗದಿಗೆ ಕೇಂದ್ರಕ್ಕೆ ಮನವಿ: ಸಕ್ಕರೆಯ ಬೆಲೆಯನ್ನು ಕೇಂದ್ರ ಸರ್ಕಾರವೇ ನಿಗದಿಪಡಿಸಬೇಕು. ಈ ಕುರಿತು ಪ್ರಧಾನಮಂತ್ರಿಗಳಿಗೆ ಪತ್ರ ಬರೆದು ಪ್ರಸ್ತಾಪಿಸಲಾಗಿದೆ. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕೂಡ ಈ ನಿಟ್ಟಿನಲ್ಲಿ ಪ್ರಯತ್ನಿಸುವುದಾಗಿ ತಿಳಿಸಿದ್ದಾರೆ ಎಂದು ಹೇಳಿದರು.

ದಿ. 08ರಂದು ತಿಡಿಗೋಳ ಚಲೋ ಬೈಕ್ ರ್ಯಾಲಿ – ಬಸವರಾಜ ಭಂಡಾರಿ

❏ ನೈಜ್ಯ ದೆಸೆ ನ್ಯೂಸ್

ಸಿರವಾರ: ಸಿಂಧನೂರು ತಾಲ್ಲೂಕಿನ ತಿಡಿಗೋಳ ಗ್ರಾಮದ ದಲಿತರ ಮೇಲೆ ದೌರ್ಜನ್ಯ ನಡೆಸಿ ಸಾಮಾಜಿಕ ಬಹಿಷ್ಕಾರ ಹಾಕಿದವರ ಮೇಲೆ ಕಾನೂನು ಕ್ರಮಕ್ಕೆ ಆಗ್ರಹಿಸಿ ಸಿಂಧನೂರಿನ ಪಿ.ಡಬ್ಲ್ಯು.ಡಿ ಕ್ಯಾಂಪ್‌ನ ಅಂಬೇಡ್ಕರ್ ಸರ್ಕಲ್‌ನಿಂದ ತಿಡಿಗೋಳವರೆಗೆ ಹಮ್ಮಿಕೊಂಡಿರುವ ಬೈಕ್ ರ್ಯಾಲಿಯಲ್ಲಿ ಸಿರವಾರ ತಾಲೂಕಿನಿಂದ ಸುಮಾರು 50ರಿಂದ 100 ಬೈಕ್ ಗಳ ಮೂಲಕ ರ್ಯಾಲಿಯಲ್ಲಿ ಭಾಗವಹಿಸಲಾಗುವುದು ಎಂದು ದಲಿತ ಮುಖಂಡ ಭಸವರಾಜ ಭಂಡಾರಿ ಹೇಳಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸಿಂಧನೂರು ತಾಲ್ಲೂಕಿನ ತಿಡಿಗೋಳ ಗ್ರಾಮದಲ್ಲಿ ದಿ. ಅಕ್ಟೋಬರ್ 18ರಂದು ನಡೆದ ಮಾರುತೇಶ್ವರ (ಆಂಜನೇಯ್ಯ) ಜಾತ್ರೆಯಲ್ಲಿ ಸವರ್ಣೀಯರು, ದಲಿತರ ಮೇಲೆ ಅಮಾನವೀಯವಾಗಿ ಹಲ್ಲೆ ನಡೆಸಿ, ಸಾಮಾಜಿಕ ಬಹಿಷ್ಕಾರ ಹಾಕಿರುವ ಘಟನೆಯು ಹೇಯಕೃತ್ಯವಾಗಿದ್ದು, ಸ್ವಾತಂತ್ರ್ಯ ಬಂದು 79 ವರ್ಷಗಳ ನಂತರವೂ ಇನ್ನೂ ಜಾತಿ ಮೌಢ್ಯ ಹಾಗೂ ಅಸ್ಪೃಶ್ಯತೆ ಜೀವಂತವಾಗಿರುವುದಕ್ಕೆ ಜ್ವಲಂತ ಸಾಕ್ಷಿಯಾಗಿದೆ. ಕಳೆದ ಕೆಲವು ತಿಂಗಳುಗಳಿಂದ ಜಿಲ್ಲೆಯಲ್ಲಿ ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ, ಅತ್ಯಚಾರ ಕೊಲೆ ಮುಂತಾದ ಸರಣಿ ದುಷ್ಕೃತ್ಯಗಳ ಮುಂದುವರಿಕೆ ತಿಡಿಗೋಳದಲ್ಲಿ ನಡೆದಿದೆ. ದೌರ್ಜನ್ಯ ನಡೆದು ಎರಡು ವಾರ ಕಳೆದರೂ ಮಸ್ಕಿ ಕ್ಷೇತ್ರದ ಶಾಸಕ ಬಸನಗೌಡ ತುರ್ವಿಹಾಳ ಅವರು ಇದುವರೆಗೂ ಭೇಟಿ ಕೊಟ್ಟಿರುವುದಿಲ್ಲ ಹಾಗೂ ದೌರ್ಜನ್ಯ ಮಾಡಿದ ಮುಖ್ಯ ಆರೋಪಿಗಳನ್ನು ಇದುವರೆಗೂ ಬಂಧಿಸಿರುವುದಿಲ್ಲ. ಭಯದ ಕಾರಣದಿಂದಾಗಿ ದಲಿತರು ಗ್ರಾಮ ತೊರೆದಿದ್ದಾರೆ. ಪೋಲಿಸ್ ಇಲಾಖೆ ಮತ್ತು ಜಿಲ್ಲಾಡಳಿತ ಈ ದೌರ್ಜನ್ಯದ ಕುರಿತು ನಿರ್ಲಕ್ಷ್ಯ ವಹಿಸಿದೆ ಇದಕ್ಕೆ ಗೃಹ ಸಚಿವರ ತಾರತಮ್ಯ ಭಾವನೆಯನ್ನು ಸಮಾಜ ಖಂಡಿಸುತ್ತದೆ ಎಂದು ಹೇಳಿದರು.

ಎರಡು ದಿನಗಳ ಹಿಂದೆ ರಾಯಚೂರಿನ ಅಂಬೇಡ್ಕರ ಭವನದಲ್ಲಿ ಜರುಗಿದ ಪ.ಜಾ ಪ.ಪಂ ಕುಂದುಕೊರತೆ ಸಭೆಯಲ್ಲಿ ಜಿಲ್ಲಾಧಿಕಾರಿಗಳು, ಎಸ್ಪಿ, ಸಮಾಜ ಕಲ್ಯಾಣ ಅಧಿಕಾರಿಗಳು ವೇದಿಕೆಯ ಮೇಲೆ ದಲಿತ ಮುಖಂಡರು ಅವರ ಸಮಸ್ಯೆಯನ್ನು ಹೇಳಿಕೊಳ್ಳುವ ಸಮಯದಲ್ಲಿ ಅವರ ಅವಹಾಲುಗಳನ್ನು ಕೇಳದೇ ಹರಟೆ ಮಾಡುತ್ತಿರುವ ದೃಶ್ಯವನ್ನು ಖಂಡಿಸುತ್ತೇವೆ, ಕಾಟಾಚಾರಕ್ಕೆ ನಡೆದಿದೆ ಎಂದು ಆರೋಪಿಸಿದರು. ವಿಜಯರಾಣಿ ಮಾತನಾಡಿದರು. ಈ ಸಂದರ್ಭದಲ್ಲಿ ಬಡ್ಡ ಹನುಮಂತ, ಸವಾರೆಪ್ಪ, ಸಾಮೇಲಪ್ಪ, ಮಲ್ಲಪ್ಪ ಕಜ್ಜಿ, ಅರಳಪ್ಪ ಯದ್ದಲದಿನ್ನಿ, ಮಲ್ಲಪ್ಪ ನಾರಬಂಡ, ಎಂ. ಮನೋಹರ, ದಾನಪ್ಪ, ಜಯಪ್ಪ ಗುತ್ತೇದಾರ್, ಗ್ಯಾನಪ್ಪ ಸೂಜಪ್ಪ, ಕರಿಯಪ್ಪ ತೋರಣದಿನ್ನಿ, ರಾಮಣ್ಣ ಮೇಸ್ತ್ರಿ, ಮೇಶಕ್ ಕೆಂಪು, ಯೇಸುಮಿತ್ರ ಮಚ್ಚಿ, ಮೌನೇಶ ಎಸ್.ಲಕ್ಷ್ಮಣ ಸೇರಿದಂತೆ ಇನ್ನಿತರರು ಇದರು.

ಕುಟುಂಬದಿಂದ ತಿರಸ್ಕೃತಗೊಂಡ ರಾಯಚೂರಿನ ಅನಾರೋಗ್ಯ ಪೀಡಿತ ರಂಗನಾಥನಿಗೆ ಕಾರುಣ್ಯ ಆಶ್ರಮದಲ್ಲಿ ಆಶ್ರಯ

❏ ನೈಜ್ಯ ದೆಸೆ ನ್ಯೂಸ್

ರಾಯಚೂರು: ನಗರದ ನೇತಾಜಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಎನ್.ಜಿ.ಓ. ಕಾಲೋನಿಯಲ್ಲಿ ವಾಸವಾಗಿದ್ದ ಪ್ರತಿಯೊಂದು ಸಾಮಾಜಿಕ ಕಾರ್ಯಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ದಾನ ಧರ್ಮಕ್ಕೆ ಹೆಸರಾಗಿದ್ದ ಅನಾರೋಗ್ಯ ಪೀಡಿತ ರಂಗನಾಥ

ಕೋರಿಶೆಟ್ಟಿ ವಯಸ್ಸು–55 ಇವರನ್ನು ಸ್ಥಳೀಯ ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ಪದಾಧಿಕಾರಿಗಳು ಹಾಗೂ ಸ್ಥಳೀಯರ ಮತ್ತು ನೇತಾಜಿ ನಗರದ ಪೊಲೀಸ್ ಇಲಾಖೆಯ ಅಧಿಕಾರಿಗಳ ಮೇರೆಗೆ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀ ಮಠ ಸೇವಾ ಟ್ರಸ್ಟ್(ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ಬುದ್ಧಿಮಾಂದ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಹಾಗೂ ಸಿಬ್ಬಂದಿಗಳಾದ ಮರಿಯಪ್ಪ ಹರ್ಷವರ್ಧನ ಇವರುಗಳ ಸಮಕ್ಷಮದಲ್ಲಿ ಆಶ್ರಮಕ್ಕೆ ಕರೆತಂದು ಆಶ್ರಯ ಕಲ್ಪಿಸಲಾಯಿತು. ಈ ಸಮಯದಲ್ಲಿ ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ನ ಸದಸ್ಯರಾದ ಬಸವರಾಜ ಪಡಶೆಟ್ಟಿ ಮಾತನಾಡಿ ನಮ್ಮ ರಂಗನಾಥ್ ಅವರು ನಿರಂತರ ಸಮಾಜ ಸೇವ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವುದು ತಮ್ಮದೇ ಆದಂತಹ ಬಹುದೊಡ್ಡ ಮಟ್ಟದ ಸಹಾಯ ಸಹಕಾರ ಮಾಡುತ್ತಿದ್ದರು. ಇಂತಹ ವ್ಯಕ್ತಿಯ ಬದುಕು ಇಂದು ಬಹುದೊಡ್ಡ ಅಘಾತದೊಂದಿಗೆ ಸಾಗುತ್ತಿದೆ.

ಪೋಲಿಸ್ ಇಲಾಖೆಯ ಅಧಿಕಾರಿಗಳು ಕೂಡ ಹೆಂಡತಿ ಮಕ್ಕಳಿಗೆ ಇವರ ಸ್ಥಿತಿಯನ್ನು ತಿಳಿಸಿದರು ಕೂಡ ಸ್ಪಂದನೆ ಮಾಡುತ್ತಿಲ್ಲ. ಆದ್ದರಿಂದ ನಮ್ಮ ಕರುನಾಡಿನ ಕರಣೆಯ ಕುಟುಂಬವಾದ ಸಿಂಧನೂರಿನ ಕಾರುಣ್ಯ ಕುಟುಂಬವನ್ನು ನಾವು ಸಂಪರ್ಕಿಸಿದಾಗ ಇವರ ಸ್ಥಿತಿಯನ್ನು ವಿವರಿಸಿದಾಗ ಒಪ್ಪಿಕೊಂಡಿರುವ ಈ ಸಂಸ್ಥೆಯ ಕರುಣಾಮಯಿ ಕಾರ್ಯಗಳನ್ನು ಮೆಚ್ಚಿಕೊಂಡೆವು. ಕೇವಲ ಒಬ್ಬ ಬಡಜಂಗಮರಾಗಿ




ದಾನಿಗಳ ಸಹಾಯ ಸಹಕಾರದೊಂದಿಗೆ ಮಾಡುತ್ತಿರುವ ಕಾರುಣ್ಯ ಆಶ್ರಮದ ಕಾರ್ಯ ಶ್ಲಾಘನೀಯ ಇಂತಹ ಸೇವ ಕಾರ್ಯಕ್ಕೆ ನಮ್ಮ ನೀಲಕಂಠೇಶ್ವರ ಸೇವಾ ಟ್ರಸ್ಟ್ ವತಿಯಿಂದ ಹಾಗೂ ಎನ್. ಜಿ. ಓ. ಕಾಲೋನಿಯ ಎಲ್ಲರೂ ಸಹಕರಿಸುತ್ತೇವೆ ಎಂದು ಮಾತನಾಡಿದರು. ಈ ಸಮಯದಲ್ಲಿ ಸುರೇಶ ಕೋರಿಶೆಟ್ಟಿ.ಶೈಲಜಾ ಕುಲಕರ್ಣಿ ದ್ವಿತೀಯ ದರ್ಜೆ ಸಹಾಯಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರು. ಮಹಾಂತೇಶ ಪೂರತಿಪ್ಲಿ ಅಧ್ಯಕ್ಷರು ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್ ಎನ್.ಜಿ. ಓ. ಕಾಲೋನಿ ರಾಯಚೂರು. ಬಸವರಾಜ ಪಡಶೆಟ್ಟಿ ಕಾರ್ಯದರ್ಶಿಗಳು ನೀಲಕಂಠೇಶ್ವರ ಟೆಂಪಲ್ ಟ್ರಸ್ಟ್.ಬಸವರಾಜ ನಿವೃತ್ತ ಜಮಾದಾರರು. ಮಂಜುಳಾ ಡಬ್ಲ್ಯೂ. ಪಿ.ಸಿ. ನೇತಾಜಿ ಪೊಲೀಸ್ ಠಾಣೆ ರಾಯಚೂರು. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಸಿಬ್ಬಂದಿಗಳಾದ ಮರಿಯಪ್ಪ ಹರ್ಷವರ್ಧನ ಹಾಗೂ ಅನೇಕ ಸ್ಥಳೀಯರು ಉಪಸ್ಥಿತರಿದ್ದರು.

ತಾಲ್ಲೂಕು ಮಟ್ಟದ ವಿಚಾರಗೋಷ್ಠಿ ಉದ್ಘಾಟನೆ | ಮಹಿಳೆಯರ ಜಾಗೃತಿ, ಸಬಲೀಕರಣಕ್ಕೆ ಜ್ಞಾನ ವಿಕಾಸ ಕೇಂದ್ರಗಳ ಕೊಡುಗೆ: ಚಂದ್ರಶೇಖರ ಜೆ.

❏ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯು ಜ್ಞಾನ ವಿಕಾಸ ಕಾರ್ಯಕ್ರಮದ ಮೂಲಕ ಮಹಿಳೆಯರಲ್ಲಿ ಜಾಗೃತಿ ಮೂಡಿಸಿ, ಅವರನ್ನು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಬಲರನ್ನಾಗಿಸುವ ಕಾರ್ಯ ಅಮಾಡುತ್ತಿದೆ ಎಂದು ಸಂಸ್ಥೆಯ ಪ್ರಾದೇಶಿಕ ನಿರ್ದೇಶಕ ಚಂದ್ರಶೇಖರ ಜೆ. ಹೇಳಿದರು.

ಪಟ್ಟಣದ ಶ್ರೀ ಭ್ರಮರಾಂಬ ಮಲ್ಲಿಕಾರ್ಜುನ ದೇವಸ್ಥಾನದ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ತಾಲ್ಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಉದ್ಘಾಟಿಸಿ ಅವರು ಮಾತನಾಡಿದರು. ತಾಲ್ಲೂಕಿನಲ್ಲಿ 25 ಕಡೆ ಜ್ಞಾನ ವಿಕಾಸ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಮಹಿಳೆಯರಲ್ಲಿ ಶಿಕ್ಷಣ, ಆರೋಗ್ಯ, ಸಾಮಾಜಿಕ ಜವಾಬ್ದಾರಿ



ಸೇರಿದಂತೆ ವಿವಿಧ ವಿಷಯಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ, ಶೈಕ್ಷಣಿಕ ಪ್ರಗತಿ ಹಾಗೂ ಕೆರೆಗಳ ಅಭಿವೃದ್ಧಿ ಸೇರಿದಂತೆ ಹಲವು ಯೋಜನೆಗಳನ್ನು ಸಂಸ್ಥೆ ಅನುಷ್ಠಾನಗೊಳಿಸುತ್ತಿದೆ ಎಂದರು.

ಜನಜಾಗೃತಿ ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಎಂ. ಅಮರೇಶ ಮಾತನಾಡಿ, ಮಹಿಳೆಯರು ಆರ್ಥಿಕ ಸ್ವಾವಲಂಬನೆ ಸಾಧಿಸುವುದರೊಂದಿಗೆ ಕುಟುಂಬ ಮತ್ತು ಸಮಾಜದ ಅಭಿವೃದ್ಧಿಯಲ್ಲಿಯೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಸಂಸ್ಥೆಯ ಯೋಜನೆಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಪುರಸಭೆ ಅಧ್ಯಕ್ಷ ಸುರೇಶ ಹರಸೂರು ಮಾತನಾಡಿ, ಮಹಿಳೆಯರು ಶಿಕ್ಷಣ, ಉದ್ಯೋಗ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಮುಂದೆ ಬರಬೇಕು. ಸರ್ಕಾರ ಮತ್ತು ವಿವಿಧ ಸಂಸ್ಥೆಗಳು ಒದಗಿಸುವ ಅವಕಾಶಗಳನ್ನು ಬಳಸಿಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದರು. ಸಂಸ್ಥೆಯ ಸಹಭಾಗಿತ್ವದ ಸ್ವಸಹಾಯ ಗುಂಪುಗಳಿಗೆ ಲಾಭಾಂಶವನ್ನು ಇದೇ ಸಂದರ್ಭದಲ್ಲಿ ವಿತರಿಸಲಾಯಿತು ಡಾ. ಬಿ.ಎಚ್. ದಿವಟರ್, ಪುರಸಭೆ ಸದಸ್ಯ ಕೃಷ್ಣ ಚಿಗರಿ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಘಟಕದ ಅಧ್ಯಕ್ಷೆ ವಿದ್ಯಾವತಿ ವನಕಿ, ಉಪನ್ಯಾಸಕಿ ನಾಗರತ್ನ ಪಿ. ಗುತ್ತೇದಾರ, ಸಂಸ್ಥೆಯ ತಾಲ್ಲೂಕು ಯೋಜನಾಧಿಕಾರಿ ಜಗದೀಶ ಬಂಡಾರಿ ಇದ್ದರು.

ಸಿದ್ದರಾಮಯ್ಯ ಹಾಗೂ ಮಹದೇವಪ್ಪ ನಡುವಿನ ಭಿನ್ನಾಭಿಪ್ರಾಯದ ವಾದಗಳಿಗೆ ತೆರೆ ಎಳೆದ ಡಾ. ಯತೀಂದ್ರ

❏ ನೈಜ್ಯ ದೆಸೆ ನ್ಯೂಸ್

ತಾಂಡವಪುರ: ನಮ್ಮ ತಂದೆಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಹಾಗೂ ಮಾಜಿ ಸಚಿವ ಡಾಕ್ಟರ್ ಎಚ್ ಸಿ ಮಹದೇವಪ್ಪನವರ ನಡುವೆ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ ಸಣ್ಣಪುಟ್ಟ ವಿಚಾರಗಳನ್ನು ಹೊರತುಪಡಿಸಿದರೆ ಅವರ ಸ್ನೇಹ ಬಾಂಧವ್ಯ ಗಟ್ಟಿಯಾಗಿದೆ ಎಂದು ಮೈಸೂರು ಜಿಲ್ಲೆ ಉಸ್ತುವಾರಿ ಸಚಿವರು ಹಾಗೂ ನಗರಭಿವೃದ್ಧಿ ಸಚಿವರಾದ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯ ರವರು ಸ್ಪಷ್ಟಪಡಿಸಿದರು.



ಅವರು ಎಂದು ಮೈಸೂರಿನ ಕಾರ್ಯಕ್ರಮದಲ್ಲಿ ಭಾಗವಹಿಸಲು ಬಂದಾಗ ಮಾಧ್ಯಮದವರು ಈ ವಿಚಾರವಾಗಿ ಕೇಳಿದ ಪ್ರಶ್ನೆ ಉತ್ತರಿಸಿದ ಸಚಿವರು ನಮ್ಮ ತಂದೆ ಸಿದ್ದರಾಮಯ್ಯ ಮಹಾದೇವಪ್ಪನವರ ನಡುವೆ ಯಾವುದೇ ವೈಮನಸಿಲ್ಲ ಅವರ ಸ್ನೇಹ ಗಟ್ಟಿ ಆಗಿದೆ ನಾನೇ ಹೋಗಿ ಅವರನ್ನು ಖುದ್ದಾಗಿ ಭೇಟಿ ಮಾಡಿ ಇದೇ ನವಂಬರ್ 26ರಂದು ಸರ್ಕಾರದಿಂದ ನಡೆಯುವ ಸಂವಿಧಾನ ದಿನಾಚರಣೆ ಕಾರ್ಯಕ್ರಮಕ್ಕೆ ತಾವು ಭಾಗವಹಿಸಬೇಕು ಕಾರ್ಯಕ್ರಮಕ್ಕೆ ಸಹಕಾರಿ ನೀಡಬೇಕೆಂದು ಕೋರಿದೆ ಅವರು ಸಹ ಒಪ್ಪಿಕೊಂಡು ಬರುವುದಾಗಿ ಹೇಳಿದ್ದಾರೆ ಕೆಲವು ಸಂಘಟನೆಗಳು ಮಾಡಿದರೆ ಮೊದಲು ಸರ್ಕಾರಿ ಕಾರ್ಯಕ್ರಮದಲ್ಲಿ ಭಾಗವಹಿಸುತ್ತೇನೆ ಎಂದು ಮಹದೇವಪ್ಪನವರು ಹೇಳಿದ್ದಾರೆ ಅರಮನೆ ವಿಚಾರವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಅರಮನೆ ಕಟ್ಟಿದವರು ಮಹಾರಾಜರೇ ಇರಬಹುದು ಮಹಾರಾಜರು ಅರಮನೆ ಕಟ್ಟಲು ಸಾರ್ವಜನಿಕರ ತೆರಿಗೆ ಹಣದಿಂದ ಅರಮನೆಯನ್ನು ಕೊಟ್ಟಿದ್ದಾರೆ ಅದು ಸಾರ್ವಜನಿಕ ಸ್ವತ್ತು ಎಂದು ಹೇಳಿದ ಸಚಿವರು ಜಂಬೂಸವಾರಿ ಸಮಯದಲ್ಲಿ ಅಂಬಾರಿಯನ್ನು ನಾವು ಬಾಡಿಗೆ ರೂಪದಲ್ಲಿ ಅರಮನೆ ವತಿಯಿಂದ ಪಡೆದುಕೊಳ್ಳುತ್ತೇವೆ ಎಂದು ವಿವರವಾಗಿ ತಿಳಿಸಿದ ಸಚಿವರು

ನಮ್ಮ ತಂದೆ ಸಿದ್ದರಾಮಯ್ಯ ವಿರುದ್ಧ ಸ್ಟಿಂಗ್ ಆಪರೇಷನ್ ಕುತಂತ್ರ ನಡೆದಿತ್ತಲ್ಲ ಅದನ್ನು ಪತ್ತೆಹಚ್ಚಲು ಪೊಲೀಸರಿಗೆ ನಮ್ಮ ತಂದೆ ಸಿದ್ದರಾಮಯ್ಯ ಅವರು ದೂರು ನೀಡಿದ್ದಾರೆ ದೂರಿನ ಅನ್ವಯ ಈಗಾಗಲೇ ಪೊಲೀಸ್ರು ಎಲ್ಲಾ ರೀತಿಯ ಎಲ್ಲಾ ಆಯಾಮಗಳಲ್ಲೂ ತನಿಖೆ ನಡೆಸುತ್ತಿದ್ದಾರೆ ನಮಗೆ ನ್ಯಾಯ ಸಿಗುತ್ತದೆ ಎಂಬ ನಂಬಿಕೆ ಮತ್ತು ಭರವಸೆ ಇದೆ ಎಂದು ಹೇಳಿದ ಸಚಿವರು ಆದಷ್ಟು ಬೇಗನೆ ಈಸ್ಟಿಂಗ್ ಆಪರೇಷನ್ ಮೂಲ ರೂವಾರಿ ಯಾರು ಎಂಬುದನ್ನು ಪೊಲೀಸ್ ಅಧಿಕಾರಿಗಳು ಪತ್ತೆಚ್ಚಬೇಕು ಅವರನ್ನು ಪತ್ತೆ ಹಚ್ಚಿ ಅವರಿಗೆ ಕಾನೂನು ಪ್ರಕಾರ ಶಿಕ್ಷೆ ಆಗಬೇಕು ಎಂದು ಸಚಿವರು ಹೇಳಿದರು

ಕೆ.ಆರ್.ನಗರದಲ್ಲಿ ಪ್ರಜಾಸೇವೆ ಆಂದೋಲನ ಸಭೆ ಉದ್ಘಾಟಿಸಿದ ಸಚಿವ ಡಾ.ಯತೀಂದ್ರ: ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಅಧಿಕಾರಿಗಳಿಗೆ ಸೂಚನೆ

❏ ನೈಜ್ಯ ದೆಸೆ ನ್ಯೂಸ್

ತಾಂಡವಪುರ ನವಂಬರ್ 7 ಮೈಸೂರು ಜಿಲ್ಲೆ ಕೆ.ಆರ್. ನಗರದಲ್ಲಿ ಕೆ.ಆರ್. ನಗರ ಮತ್ತು ಸಾಲಿಗ್ರಾಮ ತಾಲ್ಲೂಕು ಮಟ್ಟದ ಪ್ರಜಾಸೇವೆ ಆಂದೋಲನ ಸಭೆಯನ್ನು ನಗಾರಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ ಎಸ್. ಯತೀಂದ್ರ ಸಿದ್ದರಾಮಯ್ಯನ ರವರು ಉದ್ಘಾಟಿಸಿ,

ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ ಸಾರ್ವಜನಿಕರ ಸಮಸ್ಯೆಗಳಿಗೆ ಕೂಡಲೇ ಪರಿಹಾರ ಒದಗಿಸಿಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ ಸರ್ಕಾರದ ಸೇವೆಗಳು ಜನಸಾಮಾನ್ಯರಿಗೆ ಸುಲಭವಾಗಿ, ಪಾರದರ್ಶಕವಾಗಿ ಮತ್ತು ಸಕಾಲದಲ್ಲಿ ತಲುಪಬೇಕು ಎಂಬ ಉದ್ದೇಶದಿಂದ ಪ್ರಜಾಸೇವೆ ಆಂದೋಲನವನ್ನು ನಡೆಸಲಾಗುತ್ತಿದೆ. ಸರ್ಕಾರಿ ಕಚೇರಿಗಳಿಗೆ ಜನರು ಅಲೆದಾಡುವ ಬದಲು, ಸರ್ಕಾರವೇ ಜನರ ಮನೆಬಾಗಿಲಿಗೆ ತೆರಳಿ ಸೇವೆ ಒದಗಿಸಲು ಈ ವ್ಯವಸ್ಥೆಯನ್ನು ರೂಪಿಸಲಾಗಿದೆ ಎಂದು ತಿಳಿಸಿದರು...



ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವುದಷ್ಟೇ ಅಲ್ಲದೆ, ಪ್ರತಿಯೊಬ್ಬ ನಾಗರಿಕನ ಸಮಸ್ಯೆಗೂ ಆಡಳಿತ ವ್ಯವಸ್ಥೆ ಸ್ಪಂದಿಸಬೇಕು ಎಂಬುದು ನಮ್ಮ ಆಶಯ. ಜನರ ಅಹವಾಲುಗಳಿಗೆ ಸ್ಪಂದಿಸಿ,

ಅವರ ಬದುಕಿನಲ್ಲಿ ಬದಲಾವಣೆ ತರುವ ನಿಟ್ಟಿನಲ್ಲಿ ಇಂತಹ ಜನಸಂಪರ್ಕ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸಲಿವೆ ಎಂದು ತಿಳಿಸಿದರು..... ಶಾಸಕ ಡಿ ರವಿಶಂಕರ್ ಮಾತನಾಡಿ ಸರ್ಕಾರದ ಸೇವೆಗಳು ಜನಸಾಮಾನ್ಯರಿಗೆ ಸುಲಭವಾಗಿ, ಪಾರದರ್ಶಕವಾಗಿ ಮತ್ತು ಸಕಾಲದಲ್ಲಿ ತಲುಪಬೇಕು ಎಂಬ ಉದ್ದೇಶದಿಂದ ಪ್ರಜಾಸೇವೆ ಆಂದೋಲನವನ್ನು ನಡೆಸಲಾಗುತ್ತಿದೆ. ಸರ್ಕಾರಿ ಕಚೇರಿಗಳಿಗೆ ಜನರು ಅಲೆದಾಡುವ ಬದಲು, ಸರ್ಕಾರವೇ ಜನರ ಮನೆಬಾಗಿಲಿಗೆ ತೆರಳಿ ಸೇವೆ ಒದಗಿಸಲು ಈ ವ್ಯವಸ್ಥೆಯನ್ನು ರೂಪಿಸಲಾಗಿದೆ ಎಂದು ತಿಳಿಸಿದೆ.

ಮುಖ್ಯ ಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ಅವರ ಸರ್ಕಾರವು ಅಧಿಕಾರಕ್ಕೆ ಬಂದ 100 ದಿನಗಳಲ್ಲಿ ಭೂಮಿ ಇಲ್ಲದವರಿಗೆ ಭೂಮಿ ಒದಗಿಸಲು ಭೂ ಗ್ಯಾರಂಟಿ , ಸರ್ಕಾರಿ ಸೇವೆಗಳನ್ನು ಸುಲಭವಾಗಿ ಪಡೆಯಲು ಡಿಜಿಟಲ್ ಪೋರ್ಟಲ್‌ಗಳ ಮೂಲಕ ವ್ಯವಸ್ಥೆ ಕಲ್ಪಿಸುವುದು ಹಾಗೂ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ಸೌಲಭ್ಯ ಸೇರಿದಂತೆ ಜನಪರ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದ ಅವರು ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವುದಷ್ಟೇ ಅಲ್ಲದೆ, ಪ್ರತಿಯೊಬ್ಬ ನಾಗರಿಕನ ಸಮಸ್ಯೆಗೂ ಆಡಳಿತ ವ್ಯವಸ್ಥೆ ಸ್ಪಂದಿಸಬೇಕು ಎಂಬುದು ನಮ್ಮ ಆಶಯ.

ಜನರ ಅಹವಾಲುಗಳಿಗೆ ಸ್ಪಂದಿಸಿ, ಅವರ ಬದುಕಿನಲ್ಲಿ ಬದಲಾವಣೆ ತರುವ ನಿಟ್ಟಿನಲ್ಲಿ ಇಂತಹ ಜನಸಂಪರ್ಕ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸಲಿವೆ ಎಂದು ಹೇಳಿದರು ಇದೇ ಸಂದರ್ಭದಲ್ಲಿ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಇ–ಖಾತಾ ಪ್ರತಿಗಳನ್ನು ವಿತರಿಸಲಾಯಿತು. ಮೈಸೂರು ಜಿಲ್ಲಾ ಅಂಕಿ–ಅಂಶಗಳ ನೋಟ ಪುಸ್ತಕವನ್ನೂ ಬಿಡುಗಡೆಗೊಳಿಸಲಾಯಿತು. ಈ ಸಂದರ್ಭದಲ್ಲಿ ಶಾಸಕರಾದ ಡಿ ರವಿಶಂಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಯುಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾಧಿಕಾರಿ ಶ್ರೀಮತಿ ಐಶ್ವರ್ಯ ರವರು ,ಕೆ.ಆರ್ ನಗರ ಮತ್ತು ಸಾಲಿಗ್ರಾಮ ತಾಲ್ಲೂಕಿನ ತಹಸಿಲ್ದಾರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ರೈತರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು

ವಚನ ದರ್ಶನ

ಭವಬಂಧನ ಭವಪಾಶವಾದ ಕಾರಣವೇನಯ್ಯಾ?ಹಿಂದಣ ಜನ್ಮದಲಿ ಲಿಂಗವ ಮರೆದೆನಾಗಿ,ಹಿಂದಣ ಸಿರಿಯಲ್ಲಿ ಜಂಗಮವ ಮರೆದೆನಾಗಿ,ಶಿವಶರಣರ ಮನನೋಯಿಸಿ,ಭಕ್ತಿಹೀನನಾಗಿ ಕರಸ್ಥಲದ ಲಿಂಗವ ಮರೆದೆನಾಗಿಈ ಬವಣೆ ಬಂದಿತಲ್ಲದೆ,ಅದೆಲ್ಲಿಯದೊ ಪ್ರಮಥರಾಣೆ,ಮಹಾದಾನಿಯಾದ ನಮ್ಮ ಕೂಡಲಸಂಗಮದೇವಯ್ಯಾ,ನಿಮ್ಮ ಶರಣರ ಸೇವೆಗೆ ಮರಳಿ ಹುಟ್ಟಿಸಿದೆಡೆ ಸಾಲದೆ?
ಜಗಜ್ಯೋತಿ ವಿಶ್ವಗುರು ಬಸವಣ್ಣನವರ ಅತ್ಯಂತ ಪ್ರಸಿದ್ಧ ಹಾಗೂ ಅರ್ಥಗರ್ಭಿತ ವಚನಗಳಲ್ಲಿ ಒಂದಾಗಿದೆ.

ಭವಬಂಧನ ಭವಪಾಶವಾದ ಕಾರಣವೇನಯ್ಯಾ? ಮನುಷ್ಯನಿಗೆ ಈ ಲೌಕಿಕ ಜೀವನ ಅಥವಾ ಸಂಸಾರ ಎಂಬುದು ಒಂದು ಬಂಧನ ಹಾಗೂ ಪಾಶ ಹಗ್ಗ ಬೇಡಿ ಆಗಿ ಕಾಡಲು ಕಾರಣವೇನು? ಎಂದು ಬಸವಣ್ಣನವರು ಪ್ರಶ್ನಿಸುತ್ತಾರೆ.

ಹಿಂದಣ ಜನ್ಮದಲಿ ಲಿಂಗವ ಮರೆದೆನಾಗಿ
ಇದಕ್ಕೆ ಅವರೇ ಉತ್ತರಿಸುತ್ತಾ, "ನಾವು ನಮ್ಮ ಹಿಂದಿನ ಜನ್ಮಗಳಲ್ಲಿ ಭಗವಂತನನ್ನು ಲಿಂಗವನ್ನು ಮರೆತುಬಿಟ್ಟೆವಿ" ಎನ್ನುತ್ತಾರೆ.

ಹಿಂದಣ ಸಿರಿಯಲ್ಲಿ ಜಂಗಮನ ಮರೆದೆನಾಗಿ ನಮಗೆ ಹಿಂದಿನ ಜನ್ಮದಲ್ಲಿ ಸಿರಿ–ಸಂಪತ್ತು ಇದ್ದಾಗ, ಆ ಹಮ್ಮಿನಲ್ಲಿ ಸಮಾಜದ ಕಲ್ಯಾಣಕ್ಕಾಗಿ ಶ್ರಮಿಸುವ ಜಂಗಮರನ್ನು (ಶಿವಶರಣರನ್ನು ಅಥವಾ ಸತ್ಪುರುಷರನ್ನು) ಮರೆತೆವು ಅಥವಾ ಅವರನ್ನು ನಿಂದಿಸಿದೆವು. ಈ ಅಹಂಕಾರ ಮತ್ತು ಮರೆವೇ ನಮ್ಮ ಇಂದಿನ ದುಃಖ ಹಾಗೂ ಸಂಸಾರದ ಬಂಧನಕ್ಕೆ ಮುಖ್ಯ ಕಾರಣ.

ಅರಿದೊಡೀ ಸಂಸಾರವ ಹೊದ್ದಲೀವನೆ
ಕೂಡಲಸಂಗಮದೇವಾ!
ಒಮ್ಮೆ ನಮಗೆ ಈ ಸತ್ಯದ ಅರಿವಾದರೆ (ನಾವು ಮಾಡಿದ ತಪ್ಪುಗಳ ಅರಿವಾಗಿ, ಭಗವಂತ ಮತ್ತು ಸತ್ಪುರುಷರ ಮಹತ್ವ ತಿಳಿದರೆ), ಓ ಕೂಡಲಸಂಗಮದೇವಾ, ಈ ಮಾಯೆಯ ಸಂಸಾರವು ನಮ್ಮನ್ನು ಮತ್ತೆ ಕಾಡಲು ಸಾಧ್ಯವೇ? ಇಲ್ಲ, ಖಂಡಿತಾ ನಾವು ಈ ಬಂಧನದಿಂದ ಮುಕ್ತರಾಗುತ್ತೇವೆ.

ಸಾರಾಂಶ ಸಂಪತ್ತು ಮತ್ತು ಅಧಿಕಾರ ಬಂದಾಗ ದೇವನನ್ನೂ, ಸಮಾಜವನ್ನೂ ಮರೆಯಬಾರದು. ಅಹಂಕಾರವನ್ನು ಬಿಟ್ಟು ಅರಿವಿನಿಂದ ಬದುಕಿದರೆ ಮಾತ್ರ ಭವಬಂಧನದಿಂದ ಮುಕ್ತಿ ಪಡೆಯಬಹುದು ಎಂಬುದು ಈ ವಚನದ ಸಂದೇಶವಾಗಿದೆ. ವಚನಗಳು ಮನುಕುಲದ ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ ಅಂತರಗಂಗಿ–ಸಿಂಧನೂರು. 998094144

ಸರ್ಕಾರಿ ಆಸ್ಪತ್ರೆಗಳಲ್ಲಿ ಬಿಳಿ ಚೀಟಿಯಲ್ಲಿ ಔಷಧ ಬರೆದು ಹೊರಗಿನಿಂದ ಖರೀದಿಸಲು ಸೂಚಿಸಿದರೆ ಕಠಿಣ ಕ್ರಮ: ಯು.ಟಿ. ಖಾದರ್ ಎಚ್ಚರಿಕೆ

ನೈಜ್ಯ ದೆಸೆ ನ್ಯೂಸ್

ಸರ್ಕಾರಿ ಆಸ್ಪತ್ರೆಗಳಿಗೆ ಬರುವ ಬಡ ರೋಗಿಗಳಿಗೆ ಉಚಿತವಾಗಿ ಹಾಗೂ ಗುಣಮಟ್ಟದ ಔಷಧಗಳನ್ನು ಆಸ್ಪತ್ರೆಯಲ್ಲೇ ವಿತ–ರಿಸಬೇಕು. ವೈದ್ಯರು ಬಿಳಿ ಚೀಟಿಯಲ್ಲಿ ಔಷಧ ಬರೆದು ಹೊರಗಿನ ಮೆಡಿಕಲ್ ಸ್ಟೋರ್‌ಗಳಿಂದ ಖರೀದಿಸುವಂತೆ ಸೂಚಿಸುವುದನ್ನು ತಕ್ಷಣವೇ ನಿಲ್ಲಿಸಬೇಕು ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.



ಬಿಳಿ ಚೀಟಿಯ ಮೂಲಕ ಹೊರಗಿನ ಮೆಡಿಕಲ್ ಸ್ಟೋರ್‌ಗಳಲ್ಲಿ ಅನಧಿಕೃತವಾಗಿ ಔಷಧ ಮಾರಾಟಕ್ಕೆ ಅವಕಾಶ ನೀಡುವುದಿಲ್ಲ. ವೈದ್ಯರು ಬಿಳಿ ಚೀಟಿಯಲ್ಲಿ ಔಷಧ ಬರೆದು ಹೊರಗಿನಿಂದ ಖರೀದಿಸುವಂತೆ ಸೂಚಿಸುವುದು ಅಥವಾ ಅಧಿಕೃತ ಲೆಟರ್‌ಹೆಡ್ ಇಲ್ಲದೆ ಔಷಧ ವಿತರಿಸುವುದು ಕಂಡುಬಂದರೆ ಸಂಬಂಧಪಟ್ಟ ಖಾಸಗಿ ಮೆಡಿಕಲ್ ಸ್ಟೋರ್‌ಗಳ ಪರವಾನಗಿಯನ್ನು ರದ್ದುಪಡಿಸಲಾಗುವುದು ಎಂದು ಎಚ್ಚರಿಸಿದ್ದಾರೆ. ಅಲ್ಲದೆ, ಇಂತಹ ಕೃತ್ಯಗಳಲ್ಲಿ ಭಾಗಿಯಾಗುವ ವೈದ್ಯರು ಹಾಗೂ ಕರ್ತವ್ಯ ನಿರ್ಲಕ್ಷ್ಯ ತೋರುವ ಹಿರಿಯ ಅಧಿಕಾರಿಗಳ ವಿರುದ್ಧವೂ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕ ಆರೋಗ್ಯ ಸೇವೆಯಲ್ಲಿ ಯಾವುದೇ ರೀತಿಯ ಬೇಜವಾಬ್ದಾರಿತನವನ್ನು ಸಹಿಸುವುದಿಲ್ಲ. ಸರ್ಕಾರದ ಉಚಿತ ಆರೋಗ್ಯ ಸೌಲಭ್ಯಗಳು ಬಡ ರೋಗಿಗಳಿಗೆ ಪಾರದರ್ಶಕವಾಗಿ ತಲುಪುವಂತೆ ಸಂಬಂಧಪಟ್ಟ ಅಧಿಕಾರಿಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸಚಿವರು ಎಚ್ಚರಿಕೆ ನೀಡಿದ್ದಾರೆ.

’ನಮ್ಮ ಡಾಕ್ಟರ್’ ನುಡಿ ನಮನ ಡಾ. ಶಿವಶರಣಪ್ಪ ಇತ್ತಿ ಅವರ ಸಮಾಜಮುಖಿ ಸೇವೆ ಸ್ಮರಣೀಯ– ಪ್ರತಾಪಗೌಡ ಪಾಟೀಲ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ಡಾ. ಶಿವಶರಣಪ್ಪ ಇತ್ತಿ ಅವರು ಶೈಕ್ಷಣಿಕ, ಸಾಮಾಜಿಕ ಹಾಗೂ ಸಹಕಾರ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆ ಸ್ಮರಣೀಯವಾಗಿದ್ದು, ಅವರ ಆದರ್ಶಗಳು ಮುಂದಿನ ಪೀಳಿಗೆಗೆ ಮಾರ್ಗದರ್ಶನವಾಗಲಿವೆ ಎಂದು ಮಾಜಿ ಶಾಸಕ ಪ್ರತಾಪಗೌಡ ಪಾಟೀಲ ಹೇಳಿದರು.



ಪಟ್ಟಣದ ಭ್ರಮರಾಂಬ ದೇವಸ್ಥಾನದಲ್ಲಿ ಭ್ರಮರಾಂಬ ಪತ್ತಿನ ಸೌಹಾರ್ದ ಸಹಕಾರ ಸಂಘದ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಡಾ. ಶಿವಶರಣಪ್ಪ ಇತ್ತಿ ಅವರ ನಮ್ಮ ಡಾಕ್ಟರ್ ನುಡಿನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಡಾ. ಇತ್ತಿ ಅವರು ತಮ್ಮ ಬದುಕಿನುದ್ದಕ್ಕೂ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಸಮಾಜದ ಏಳಿಗೆಗೆ ಶ್ರಮಿಸಿದವರು. ಸರಳತೆ, ಸೇವಾ ಮನೋಭಾವ ಹಾಗೂ ಸಮಾಜಮುಖಿ ಚಿಂತನೆಗಳಿಂದ ಜನರ ಪ್ರೀತಿ, ವಿಶ್ವಾಸ ಗಳಿಸಿದ್ದರು. ಅವರ ವ್ಯಕ್ತಿತ್ವ ಮತ್ತು ಸಾಧನೆಗಳು ಸದಾ ಸ್ಮರಣೀಯವಾಗಿರಲಿವೆ ಎಂದು ಹೇಳಿದರು. ಡಾ. ಕೆ. ಶಿವರಾಜ ಅವರು ಡಾ. ಇತ್ತಿ ಅವರೊಂದಿಗಿನ ಒಡನಾಟ ಹಾಗೂ ಅವರ ಸಾಧನೆಗಳನ್ನು ಸ್ಮರಿಸಿ ನುಡಿನಮನ ಸಲ್ಲಿಸಿದರು. ಗಚ್ಚಿನಮಠದ ವರರುದ್ರಮುನಿ ಸ್ವಾಮೀಜಿ ಆಶೀರ್ವಚನ ನೀಡಿ, ಮನುಷ್ಯನ ಬದುಕಿನ ಸಾಥ–’ಕತೆ ಸಮಾಜಕ್ಕೆ ಸಲ್ಲಿಸಿದ ಸೇವೆಯಲ್ಲಿ ಅಡಗಿದೆ. ಡಾ. ಇತ್ತಿ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು ಎಂದರು.

ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ, ವಕೀಲ ಮಸ್ಕಿ ನಾಗರಾಜ, ಡಾ. ಬಿ.ಎಚ್. ದಿವಟರ್, ಡಾ. ವಿಜಯಕುಮಾರ ಹಾಗೂ ಸಹಕಾರ ಭಾರತಿ ಸಂಯೋಜಕ ರಮೇಶ ವೈದ್ಯ ಮಾತನಾಡಿ, ಡಾ. ಇತ್ತಿ ಅವರ ವ್ಯಕ್ತಿತ್ವ ಮತ್ತು ಸಮಾಜ–ಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು. ಭ್ರಮರಾಂಬ ಸಹಕಾರ ಸಂಘದ ಅಧ್ಯಕ್ಷ ಪಂಪಣ್ಣ ಗುಂಡಳ್ಳಿ, ಉಪಾಧ್ಯಕ್ಷ ಚಿದಾನಂದ ಎಚ್., ಇತ್ತಿ ಕುಟುಂಬದ ಡಾ. ಮಲ್ಲಿಕಾರ್ಜುನ ಇತ್ತಿ, ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವೀರೇಶ ಹಿರೇಮಠ ಸೇರಿದಂತೆ ಕುಟುಂಬದ ಸದಸ್ಯರು, ಸಹಕಾರ ಸಂಘದ ಪದಾಧಿಕಾ–ರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು. ಮಹಾಂತೇಶಮಸ್ಕಿ,ವೀರೇಶಸೌದ್ರಿನಿರೂಪಿಸಿದರು.

ಅಂತರಾಷ್ಟ್ರೀಯ ಮಟ್ಟಕ್ಕೆ ಖಾದಿ ಕೊಂಡೊಯ್ಯಲು ರಾಯಭಾರಿಗಳ ನೇಮಕ : ಸಚಿವ ಕಾಶಪ್ಪನವರ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಕರ್ನಾಟಕದ ಖಾದಿ ಉತ್ಪನ್ನಗಳನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸಿ, ಜಾಗತಿಕ ಮಾರುಕಟ್ಟೆಯಲ್ಲಿ ಖಾದಿಗೆ ಬೇಡಿಕೆ ಹೆಚ್ಚಿಸುವ ನಿಟ್ಟಿನಲ್ಲಿ ವಿಶೇಷ ಕಾರ್ಯಯೋಜನೆ ರೂಪಿಸಬೇಕು. ಖಾದಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಿವಿಧ ದೇಶಗಳಲ್ಲಿ ರಾಯಭಾರಿಗಳ ರೀತಿಯಲ್ಲಿ ಕಾರ್ಯನಿರ್ವಹಿಸುವ ವ್ಯಕ್ತಿಗಳನ್ನು ಗುರುತಿಸಿ ನೇಮಿಸಿಕೊಳ್ಳಬೇಕು ಎಂದು ಸಣ್ಣ ಕೈಗಾ–ರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಎಸ್. ಕಾಶಪ್ಪನವರ ಅಧಿಕಾರಿಗಳಿಗೆ ಸೂಚಿಸಿದರು.ನಕ್ಷೆಗಳನ್ನು ನೋಡಿ



ಬೆಂಗಳೂರಿನ ಖಾದಿ ಭವನದಲ್ಲಿ ನಡೆದ ಖಾದಿ, ಉಣ್ಣೆ ಮತ್ತು ರೇಷ್ಮೆ ಸಂಘ–ಸಂಸ್ಥೆಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಖಾದಿ ಕೇವಲ ಸಾಂಪ್ರದಾಯಿಕ ಉಡುಪು ಮಾತ್ರವಲ್ಲ. ಕರ್ನಾಟಕದ ಗ್ರಾಮೀಣ ಪ್ರದೇಶಗಳ ಸಾವಿರಾರು ಕಸುಬುದಾರರ ಜೀವನಾಧಾರವಾಗಿರುವ ಈ ಉದ್ಯಮಕ್ಕೆ ಆಧುನಿಕ ಮಾರುಕಟ್ಟೆ ಮತ್ತು ಜಾಗತಿಕ ಬ್ರ್ಯಾಂಡಿಂಗ್ ಅಗತ್ಯವಿದೆ ಎಂದರು.

ಖಾದಿಯನ್ನು ಅಂತರಾಷ್ಟ್ರೀಯ ಬ್ರ್ಯಾಂಡ್ ಆಗಿ ರೂಪಿಸುವ ಉದ್ದೇಶದಿಂದ, ವಿದೇಶಗಳಲ್ಲಿ ಖಾದಿಯ ಪ್ರಚಾರಕ್ಕೆ ನೆರವಾಗುವಂತಹ ರಾಯಭಾ–ರಿಗಳನ್ನು ನೇಮಿಸಿಕೊಳ್ಳುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ವಿದೇಶಿ ಮಾರುಕಟ್ಟೆಯಲ್ಲಿ ಕರ್ನಾಟಕದ ಖಾದಿ, ರೇಷ್ಮೆ ಮತ್ತು ಉಣ್ಣೆ ಉತ್ಪನ್ನಗಳಿಗೆ ಅವಕಾಶ ಕಲ್ಪಿಸಲು ರಫ್ತು, ಆನ್‌ಲೈನ್ ಮಾರಾಟ, ಬ್ರ್ಯಾಂಡಿಂಗ್ ಮತ್ತು ಆಧುನಿಕ ಮಾರುಕಟ್ಟೆ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು. 100 ಕೋಟಿ ಪ್ರಸ್ತಾವನೆ ಸಿದ್ಧಪಡಿಸಲು ಸೂಚನೆ ಖಾದಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಅಗತ್ಯವಿರುವ ಅನುದಾನವನ್ನು ಹೆಚ್ಚಿಸುವ ಉದ್ದೇಶದಿಂದ 2027–28ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ 100 ಕೋಟಿ ಮೊತ್ತದ ವಿಶೇಷ ಪ್ರಸ್ತಾವನೆ ಸಿದ್ಧಪಡಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಈ ಅನುದಾನವನ್ನು ಖಾದಿ ಉತ್ಪಾದನಾ ಸಂಸ್ಥೆಗಳ ಮೂಲಸೌಕರ್ಯ ಅಭಿವೃದ್ಧಿ, ಆಧುನಿಕ ಯಂತ್ರೋಪಕರಣಗಳ ಅಳವಡಿಕೆ, ಸಾಮಾನ್ಯ ಸೇವಾ ಕೇಂದ್ರಗಳ ಸ್ಥಾಪನೆ, ಮಾರುಕಟ್ಟೆ ವಿಸ್ತರಣೆ, ಬ್ರ್ಯಾಂಡಿಂಗ್, ಡಿಜಿಟಲ್ ಹಾಗೂ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ, ಕಸುಬುದಾರರ ಕಲ್ಯಾಣ ಸೇರಿದಂತೆ ವಿವಿಧ ಉದ್ದೇಶಗಳಿಗೆ ಬಳಸುವಂತೆ ಸಮಗ್ರ ಯೋಜನೆ ರೂಪಿಸಬೇಕು ಎಂದು ನಿರ್ದೇಶನ ನೀಡಿದರು. ಸಭೆಯಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಮಸ್ಕಿ ಶಾಸಕ ಬಸನಗೌಡ ತುರುವಿಹಾಳ,ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಟೇಶ್ ಸೇ–ರಿದಂತೆ ಖಾದಿ, ಉಣ್ಣೆ ಮತ್ತು ರೇಷ್ಮೆ ಕ್ಷೇತ್ರದ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ವಾಯುಪಡೆ ಸೈನಿಕರ ಜೊತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ದೀಪಾವಳಿ ಸಂಭ್ರಮ

ನೈಜ್ಯ ದೆಸೆ ನ್ಯೂಸ್

ಬಾಗ್ಡೊಗ್ರಾ: ದೇಶದ ಗಡಿ ರಕ್ಷಣೆ ಹಾಗೂ ವಿಪತ್ತು ಸಂದರ್ಭಗಳಲ್ಲಿ ಭಾರತೀಯ ವಾಯುಪಡೆ ನಿರ್ವಹಿಸುತ್ತಿರುವ ಪಾತ್ರವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ. ಪಶ್ಚಿಮ ಬಂಗಾಳದ ಬಾಗ್ಡೊಗ್ರಾ ವಾಯುನೆಲೆಯಲ್ಲಿ ದೀಪಾವಳಿಗೂ ಮುನ್ನ ಸಶಸ್ತ್ರ ಪಡೆಗಳ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದ ಅವರು, ಸೈನಿಕರ ಧೈರ್ಯ, ಶಿಸ್ತು ಮತ್ತು ಸಮರ್ಪಣೆ ದೇಶದ ಹೆಮ್ಮೆಯಾಗಿದೆ ಎಂದು ಹೇಳಿದರು.

ಭಾರತೀಯ ವಾಯು ಯೋಧರ ಧೈರ್ಯ ಮತ್ತು ಬದ್ಧತೆ ದೇಶದಲ್ಲಷ್ಟೇ ಅಲ್ಲದೆ ಜಗತ್ತಿನಾದ್ಯಂತ ಗುರುತಿಸಲ್ಪಟ್ಟಿದೆ ಎಂದ ರಾಜನಾಥ್ ಸಿಂಗ್, ಪ್ರತಿ–ಕೂಲ ಪರಿಸ್ಥಿತಿಗಳಲ್ಲೂ ದೇಶವನ್ನು ರಕ್ಷಿಸುವುದರ ಜೊತೆಗೆ ವಿವಿಧ ವಿಪತ್ತುಗಳ ಸಂದರ್ಭದಲ್ಲಿ ನೆರವಿಗೆ ಧಾವಿಸುವ ಸಾಮರ್ಥ್ಯವನ್ನು ವಾಯುಪಡೆ ಹೊಂದಿದೆ ಎಂದು ಹೇಳಿದರು.ನಕ್ಷೆಗಳನ್ನು ನೋಡಿ ಸಶಸ್ತ್ರ ಪಡೆಗಳಲ್ಲಿ ಶಿಸ್ತಿನ ಮಹತ್ವವನ್ನು ಒತ್ತಿ ಹೇಳಿದ ಅವರು, ತಂತ್ರಜ್ಞಾನ ಎಷ್ಟೇ ಮುಂದುವರಿದಿದ್ದರೂ ಸೈನಿಕರಲ್ಲಿ ಧೈರ್ಯ ಮತ್ತು ಶಿಸ್ತು ಇಲ್ಲದಿದ್ದರೆ ಅದರ ಪ್ರಯೋಜನವಾಗುವುದಿಲ್ಲ ಎಂದರು. ಶಿಸ್ತು ಸಾಮಾನ್ಯ ಸೈನಿಕನನ್ನು ಅಸಾಧಾರಣ ಯೋಧನನ್ನಾಗಿ ಪರಿವರ್ತಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಭವಿಷ್ಯದ ಯುದ್ಧಕ್ಕೆ ತಂತ್ರಜ್ಞಾನವೇ ಬಲ ಡ್ರೋನ್‌ಗಳು, ಡ್ರೋನ್ ವಿರೋಧಿ ವ್ಯವಸ್ಥೆಗಳು ಮತ್ತು ಸೈಬರ್ ಭದ್ರತೆ ಸೇರಿದಂತೆ ಆಧುನಿಕ ತಂತ್ರಜ್ಞಾನಗಳನ್ನು ಸಶಸ್ತ್ರ ಪಡೆಗಳಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದು ರಕ್ಷಣಾ ಸಚಿವರು ಹೇಳಿದರು. ಸೈನಿಕರು ಈಗಾಗಲೇ ಡ್ರೋನ್ ನಿರ್ವಹಣೆ, ಸೈಬರ್ ಭದ್ರತೆ ಹಾಗೂ ಯುದ್ಧದ ಹೊಸ ವಿಧಾನಗಳ ಕುರಿತು ತರಬೇತಿ ಪಡೆಯುತ್ತಿದ್ದಾರೆ ಎಂದರು.

ಮುಂಬರುವ ದಿನಗಳಲ್ಲಿ ಭಾರತೀಯ ಸಶಸ್ತ್ರ ಪಡೆಗಳನ್ನು ಇನ್ನಷ್ಟು ತಂತ್ರಜ್ಞಾನ ಆಧಾರಿತವಾಗಿಸುವ ನಿಟ್ಟಿನಲ್ಲಿ ಸರ್ಕಾರ ಮುಂದುವರಿಯಲಿದೆ ಎಂದು ಅವರು



ವಿಶ್ವಾಸ ವ್ಯಕ್ತಪಡಿಸಿದರು.ನಕ್ಷೆಗಳನ್ನು ನೋಡಿ ಸ್ವದೇಶಿ ತಂತ್ರಜ್ಞಾನಕ್ಕೆ ಒತ್ತು ಭಾರತದ ರಕ್ಷಣಾ ಉತ್ಪಾದನಾ ಸಾಮರ್ಥ್ಯ ಹೆಚ್ಚುತ್ತಿರುವುದನ್ನು ರಾಜನಾಥ್ ಸಿಂಗ್ ಇದೇ ವೇಳೆ ಶ್ಲಾಘಿಸಿದರು. ದೇಶೀಯ ನವೋದ್ಯಮಗಳು ಮತ್ತು ಕೈಗಾರಿಕೆಗಳು ಡ್ರೋನ್‌ಗಳು, ಡ್ರೋನ್ ವಿರೋಧಿ ವ್ಯವಸ್ಥೆಗಳು ಹಾಗೂ ಸೈನಿಕರಿಗೆ ಅಗತ್ಯವಿರುವ ಆಧುನಿಕ ಉಪಕರಣಗಳನ್ನು ಅಭಿವೃದ್ಧಿಪಡಿಸುತ್ತಿವೆ ಎಂದರು.

ಭಾರತದಲ್ಲೇ ಅಭಿವೃದ್ಧಿಪಡಿಸಲಾದ ತಂತ್ರಜ್ಞಾನವನ್ನು ಭಾರತೀಯ ಸೈನಿಕರು ಅಳವಡಿಸಿಕೊಂಡು ಬಳಸುತ್ತಿರುವುದಕ್ಕೆ ಹೆಮ್ಮೆಯಿದೆ ಎಂದು ಅವರು ಹೇಳಿದರು. ಆತ್ಮನಿರ್ಭರ ಭಾರತದ ಗುರಿಯ ಭಾಗವಾಗಿ ರಕ್ಷಣಾ ಕ್ಷೇತ್ರದಲ್ಲಿ ದೇಶೀಯ ತಂತ್ರಜ್ಞಾನ ಮತ್ತು ಉತ್ಪಾದನೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು. ಸ್ಥಳೀಯರೊಂದಿಗೆ ಉತ್ತಮ ಬಾಂಧವ್ಯಕ್ಕೆ ಕರೆ ಸೈನಿಕರು ತಾವು ನಿಯೋಜನೆಗೊಂಡಿರುವ ಪ್ರದೇಶಗಳ ಸ್ಥಳೀಯ ಜನರೊಂದಿಗೆ ಉತ್ತಮ ಸಂಬಂಧವನ್ನು ಕಾಪಾಡಿಕೊಳ್ಳಬೇಕು ಎಂದು ರಾಜನಾಥ್ ಸಿಂಗ್ ಕರೆ ನೀಡಿದರು. ಸೈನಿಕರ ನಡವಳಿಕೆ, ಭಾಷೆ, ಸಮವಸ್ತ್ರ ಮತ್ತು ಸಂಯಮವು ಸ್ಥಳೀಯರು ಸಶಸ್ತ್ರ ಪಡೆಗಳನ್ನು ನೋಡುವ ರೀತಿಯ ಮೇಲೆ ಪರಿಣಾಮ ಬೀರುತ್ತದೆ ಎಂದರು. ಬಾಗ್ಡೊಗ್ರಾ ಮತ್ತು ಸುತ್ತಮುತ್ತಲಿನ ಜನರಿಗೆ ಸೇನೆಯ ಬಗ್ಗೆ ಅಪಾರ ಗೌರವ ಮತ್ತು ಪ್ರೀತಿ ಇದೆ. ಆ ಬಾಂಧವ್ಯವನ್ನು ಕಾಪಾಡಿಕೊಳ್ಳುವುದು ಸೈನಿಕರ ಜವಾಬ್ದಾರಿಯೂ ಹೌದು ಎಂದು ಅವರು ಹೇಳಿದರು.

ಜನಸಾಮಾನ್ಯರಿಗೆ ಸದ್ಯದಲ್ಲೇ ಮತ್ತೊಂದು ಬರೆ ‘ಗ್ಯಾರಂಟಿ’, ಆಟೋ ಪ್ರಯಾಣ ದರ ಏರಿಕೆ..?

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ರಾಜ್ಯದಲ್ಲಿ ಹಾಲು, ಮೊಸರು ಸೇರಿದಂತೆ ನಂದಿನಿ ಉತ್ಪನ್ನಗಳ ಬೆಲೆ ಏರಿಕೆ ಹಾಗೂ ಬಸ್ ಪ್ರಯಾಣ ದರ ಹೆಚ್ಚಳದ ಬೆನ್ನಲ್ಲೇ ಇದೀಗ ಆಟೋ ಪ್ರಯಾಣ ದರ ಏರಿಕೆಯ ಚರ್ಚೆ ಮುನ್ನೆಲೆಗೆ ಬಂದಿದೆ. ಆಟೋ ಪ್ರಯಾಣ ದರವನ್ನು ಪರಿಷ್ಕರಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲು ಆಟೋ ಸಂಘಟನೆಗಳ ಒಕ್ಕೂಟ ಸಿದ್ಧತೆ ನಡೆಸಿದ್ದು, ಜನಸಾಮಾನ್ಯ–ರಿಗೆ ಮತ್ತೊಂದು ದರ ಏರಿಕೆಯ ಬಿಸಿ ತಟ್ಟುವ ಸಾಧ್ಯತೆ ಎದುರಾಗಿದೆ.ನಕ್ಷೆಗಳನ್ನು ನೋಡಿ



ರಾಜ್ಯದಲ್ಲಿ ಪ್ರಸ್ತುತ ಆಟೋ ಪ್ರಯಾಣದ ಕನಿಷ್ಠ ದರ 36 ರೂ. ಇದ್ದು, ಪ್ರತಿ ಕಿಲೋಮೀಟರ್‌ಗೆ 18 ರೂ. ನಿಗದಿಯಾಗಿದೆ. ಈ ದರವನ್ನು ಹೆಚ್ಚಿಸುವಂತೆ ಆಟೋ ಚಾಲಕರ ಸಂಘಟನೆಗಳು ಒತ್ತಾಯಿಸುತ್ತಿವೆ. ಇಂಧನ ಬೆಲೆ, ವಾಹನ ನಿರ್ವಹಣೆ ವೆಚ್ಚ ಹಾಗೂ ಜೀವನ ನಿರ್ವಹಣೆಯ ಖರ್ಚು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ದರ ಪರಿಷ್ಕರಣೆ ಅಗತ್ಯ ಎಂಬುದು ಸಂಘಟನೆಗಳ ವಾದವಾಗಿದೆ. ತಮಿಳುನಾಡು ಮಾದರಿ ಜಾ–ರಿಗೆ ಒತ್ತಾಯ:ತಮಿಳುನಾಡಿನಲ್ಲಿ ಜಾ–ರಿಯಲ್ಲಿದೆ ಎಂದು ಉಲ್ಲೇಖಿಸಲಾಗಿರುವ ದರ ಮಾದರಿಯಂತೆ ಕರ್ನಾಟಕದಲ್ಲೂ ಆಟೋ ಪ್ರಯಾಣ ದರ ನಿಗದಿಪಡಿಸಬೇಕು ಎಂಬ ಬೇಡಿಕೆ ಕೇಳಿಬಂದಿದೆ. ಅಲ್ಲಿ ಕನಿಷ್ಠ ಪ್ರಯಾಣ ದರವನ್ನು 50 ರೂ. ಹಾಗೂ ಪ್ರತಿ ಕಿಲೋಮೀಟರ್‌ಗೆ 25 ರೂ. ನಿಗದಿಪಡಿಸಿರುವ ಮಾದರಿಯನ್ನು ರಾಜ್ಯದಲ್ಲೂ ಜಾ–ರಿಗೆ ತರಬೇಕೆಂದು ಆಟೋ ಸಂಘಟನೆಗಳ ಒಕ್ಕೂಟ ಆಗ್ರಹಿಸಲು ಮುಂದಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಪ್ರಸ್ತುತ ದರ ವ್ಯವಸ್ಥೆಯನ್ನು ಪರಿಷ್ಕರಿಸಿ, ಕನಿಷ್ಠ ಪ್ರಯಾಣ ದರ ಹಾಗೂ ಪ್ರತಿ ಕಿಲೋಮೀಟ–ರ್‌ನ ದರವನ್ನು ಹೆಚ್ಚಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ನಡೆಯುತ್ತಿದೆ. ಜನಸಾಮಾನ್ಯರ ಜೇಬಿಗೆ ಮತ್ತಷ್ಟು ಹೊರೆ?–ಈಗಾಗಲೇ ಹಾಲು ಮತ್ತು ಮೊಸರಿನ ಬೆಲೆ ಏರಿಕೆ, ಬಸ್ ಪ್ರಯಾಣ ದರ ಹೆಚ್ಚಳದಿಂದ ಸಂಕಷ್ಟ ಎದುರಿಸುತ್ತಿರುವ ಜನರಿಗೆ ಆಟೋ ದರ ಏರಿಕೆಯ ಪ್ರಸ್ತಾವನೆ ಮತ್ತೊಂದು ಹೊರೆ ತಂದೊಡ್ಡುವ ಆತಂಕ ಮೂಡಿಸಿದೆ.

ದಿನನಿತ್ಯ ಕಚೇರಿ, ಶಾಲಾ–ಕಾಲೇಜು ಹಾಗೂ ಇತರ ಕೆಲಸಗಳಿಗೆ ಆಟೋಗಳನ್ನು ಅವಲಂಬಿಸಿರುವ ಪ್ರಯಾಣಿಕರ ಮೇಲೆ ದರ ಪರಿಷ್ಕರಣೆಯ ಪರಿಣಾಮ ಬೀರುವ ಸಾಧ್ಯತೆಯಿದೆ.ಒಕ್ಕೂಟವು ಸರ್ಕಾರಕ್ಕೆ ಅಧಿಕೃತ ಪ್ರಸ್ತಾವನೆ ಸಲ್ಲಿಸಿದ ಬಳಿಕ ದರ ಏರಿಕೆ ಕುರಿತು ಸರ್ಕಾರ ಯಾವ ನಿಲುವು ತೆಗೆದುಕೊಳ್ಳಲಿದೆ ಎಂಬುದು ಕುತೂಹಲ ಮೂಡಿಸಿದೆ. ಸದ್ಯಕ್ಕೆ ಆಟೋ ದರ ಏರಿಕೆ ಪ್ರಸ್ತಾವನೆ ಹಂತದಲ್ಲಿದ್ದು, ಅಂತಿಮ ನಿರ್ಧಾರ ಸರ್ಕಾರದ ಕೈಯಲ್ಲಿದೆ.

ಜೂನ್‌ನಿಂದ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲೂ ದ್ವಿಭಾಷಾ ಶಿಕ್ಷಣ : ಸರ್ಕಾರದ ಮಹತ್ವದ ನಿರ್ಧಾರ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಸರ್ಕಾರಿ ಶಾಲೆಗಳಿಂದ ಖಾಸಗಿ ಶಾಲೆಗಳತ್ತ ವಿದ್ಯಾರ್ಥಿಗಳ ವಲಸೆ ತಡೆಯಲು ಕರ್ನಾಟಕ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದ್ದು, ಮುಂದಿನ ಶೈಕ್ಷಣಿಕ ವರ್ಷದಿಂದ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ವಿಭಾಗಗಳನ್ನು ಆರಂಭಿಸಿ, ಅವುಗಳನ್ನು ದ್ವಿಭಾಷಾ ಶಾಲೆಗಳನ್ನಾಗಿ ಪರಿವರ್ತಿಸಲು ನಿರ್ಧರಿಸಿದೆ. ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಈ ಘೋಷಣೆ ಮಾಡಿದ್ದಾರೆ.ನಕ್ಷೆಗಳನ್ನು ನೋಡಿ

ಪೋಷಕರಲ್ಲಿ ಇಂಗ್ಲಿಷ್ ಮಾಧ್ಯಮ ಶಿಕ್ಷಣದ ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರಿ ಶಾಲೆಗಳಲ್ಲೇ ಕನ್ನಡದ ಜೊತೆಗೆ ಇಂಗ್ಲಿಷ್ ಮಾಧ್ಯಮದ ಆಯ್ಕೆಯನ್ನು ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ. ಮಕ್ಕಳಿಗೆ ಯಾವ ಬೋಧನಾ ಮಾಧ್ಯಮ ಬೇಕೆಂಬುದನ್ನು ಆಯ್ಕೆ ಮಾಡುವ ಹಕ್ಕು ಪೋಷಕರಿಗಿದೆ ಎಂದು ಸಚಿವರು ಹೇಳಿದ್ದಾರೆ. 48,527 ಸರ್ಕಾರಿ ಶಾಲೆಗಳಿಗೆ ವಿಸ್ತರಣೆಯುಡಿಐ–ಎಸ್‌ಇ+ 2025–26ರ ಅಂಕಿಅಂಶಗಳ ಪ್ರಕಾರ ಕರ್ನಾಟಕದಲ್ಲಿ 48,527 ಸರ್ಕಾರಿ ಶಾಲೆಗಳಿವೆ. ಈ ಎಲ್ಲ ಶಾಲೆಗಳಲ್ಲೂ ಹಂತ ಹಂತವಾಗಿ ದ್ವಿಭಾಷಾ ವ್ಯವಸ್ಥೆ ಜಾರಿಗೆ ತರಲು ಸರ್ಕಾರ ಮುಂದಾಗಿದೆ.

ಈಗಾಗಲೇ ರಾಜ್ಯದಲ್ಲಿ 6,539 ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ವಿಭಾಗಗಳು ಆರಂಭವಾಗಿವೆ. 2024–25ರಲ್ಲಿ ಸುಮಾರು 2,000 ಶಾಲೆಗಳಿಗೆ ಹೊಸ ವಿಭಾಗಗಳನ್ನು ಆರಂಭಿಸಲು ಅನುಮತಿ ನೀಡಲಾಗಿತ್ತು. 2025–26ರಲ್ಲಿ ಮತ್ತಷ್ಟು 4,134 ಶಾಲೆಗಳನ್ನು ಯೋಜನೆಗೆ ಸೇರಿಸಲಾಗಿದೆ.ಈ ಯೋಜನೆಯಡಿ ಆರಂಭಿಕ ಹಂತದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಮೊದಲ ಬ್ಯಾಚ್ ಇದೀಗ 7ನೇ ತರಗತಿಗೆ ತಲುಪಿದೆ. ಬೆಂಗಳೂರಿನಲ್ಲೂ ಭಾರಿ ವಿಸ್ತರಣೆ ಬೆಂಗಳೂರು ಉತ್ತರ ಮತ್ತು ದಕ್ಷಿಣ ವಲಯಗಳಲ್ಲಿ



ಒಟ್ಟು 1,465 ಸರ್ಕಾರಿ ಶಾಲೆಗಳಿದ್ದು, ಅವುಗಳಲ್ಲಿ 1,103 ಶಾಲೆಗಳಿಗೆ ಇಂಗ್ಲಿಷ್ ಮಾಧ್ಯಮ ವಿಭಾಗ ಆರಂಭಿಸಲು ಅನುಮತಿ ನೀಡಲಾಗಿದೆ.

ಬೆಂಗಳೂರು ದಕ್ಷಿಣ 730 ಶಾಲೆಗಳು ಬೆಂಗಳೂರು ಉತ್ತರ 373 ಶಾಲೆಗಳು ಈ ವಿಭಾಗಗಳು ಮೊದಲ ತರಗತಿಯಿಂದಲೇ ಆರಂಭವಾಗಲಿವೆ.ನಕ್ಷೆಗಳನ್ನು ನೋಡಿ ಶಿಕ್ಷಕರ ತರಬೇತಿಯೇ ದೊಡ್ಡ ಸವಾಲು ಸರ್ಕಾರದ ನಿರ್ಧಾರಕ್ಕೆ ಪೋಷಕರಿಂದ ಬೇಡಿಕೆ ಇರುವುದಾದರೂ, ಇಂಗ್ಲಿಷ್‌ನಲ್ಲಿ ಪರಿಣಾಮಕಾ–ರಿಯಾಗಿ ಬೋಧಿಸಬಲ್ಲ ಶಿಕ್ಷಕರ ಲಭ್ಯತೆ ಯೋಜನೆಯ ಯಶಸ್ಸಿಗೆ ನಿರ್ಣಾಯಕವಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಈಗಾಗಲೇ ದ್ವಿಭಾಷಾ ಮಾಧ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳ ವಾಸ್ತವಿಕ ಸ್ಥಿತಿಯನ್ನು ಮೊದಲು ಪರಿಶೀಲಿಸಿ, ನಂತರ ರಾಜ್ಯಾದ್ಯಂತ ವಿಸ್ತರಣೆ ಮಾಡಬೇಕು ಎಂದು ಶಿಕ್ಷಣ ತಜ್ಞರು ಎಚ್ಚರಿಸಿದ್ದಾರೆ. ಕೇವಲ ಕೆಲವು ದಿನಗಳ ತರಬೇತಿ ನೀಡುವುದರಿಂದ ಶಿಕ್ಷಕರು ಇಂಗ್ಲಿಷ್‌ನಲ್ಲಿ ಪರಿಣಾಮಕಾರಿಯಾಗಿ ಬೋಧಿಸಲು ಸಾಧ್ಯವಿಲ್ಲ; ಮಾತನಾಡುವ ಸಾಮಥ–’್ಯ ಮತ್ತು ತರಗತಿಯಲ್ಲಿ ವಿಷಯ ಬೋಧಿಸುವ ಸಾಮರ್ಥ್ಯ ಎರಡಕ್ಕೂ ಪ್ರತ್ಯೇಕ ತರಬೇತಿ ಅಗತ್ಯ ಎಂಬ ಅಭಿಪ್ರಾಯವೂ ಕೇಳಿಬಂದಿದೆ.

ನಿರ್ಧಾರದ ಹಿಂದಿರುವ ಉದ್ದೇಶ ಏನು? 2019–20ರಲ್ಲಿ ಎಚ್.ಡಿ. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ಶಿಕ್ಷಣದ ಪರಿಕಲ್ಪನೆ ಮುನ್ನೆಲೆಗೆ ಬಂದಿತ್ತು. ಈಗ ಅದನ್ನು ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಿಗೆ ವಿಸ್ತ–ರಿಸುವ ನಿರ್ಧಾರವು ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚಿಸುವುದು, ಖಾಸಗಿ ಶಾಲೆಗಳತ್ತ ವಿದ್ಯಾರ್ಥಿಗಳ ವಲಸೆ ತಡೆಯುವುದು ಮತ್ತು ಪೋಷಕರ ಇಂಗ್ಲಿಷ್ ಮಾಧ್ಯಮದ ಬೇಡಿಕೆಯನ್ನು ಸರ್ಕಾರಿ ವ್ಯವಸ್ಥೆಯಲ್ಲೇ ಪೂರೈಸುವುದು ಎಂಬ ಮೂರು ಪ್ರಮುಖ ಉದ್ದೇಶಗಳನ್ನು ಹೊಂದಿದೆ.

ಆದರೆ, ಶಾಲೆಗಳಲ್ಲಿ ಇಂಗ್ಲಿಷ್ ವಿಭಾಗ ಆರಂಭಿಸುವುದಷ್ಟೇ ಸಾಕಾಗುವುದಿಲ್ಲ. ಸಮರ್ಪಕ ಶಿಕ್ಷಕರ ನೇಮಕ, ಗುಣಮಟ್ಟದ ತರಬೇತಿ, ಪಠ್ಯಪುಸ್ತಕ–ಬೋಧನಾ ಸಾಮಗ್ರಿ, ಗ್ರಾಮೀಣ ಪ್ರದೇಶಗಳಲ್ಲಿನ ಮೂಲಸೌಕರ್ಯ ಮತ್ತು ಎರಡೂ ಮಾಧ್ಯಮಗಳ ಗುಣಮಟ್ಟ ಕಾಪಾಡುವುದು ಇವೆಲ್ಲವೂ ಯೋಜನೆಯ ಯಶಸ್ಸನ್ನು ನಿರ್ಧರಿಸಲಿವೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101